MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 239 | ಭಾನುವಾರ : 06-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 239 | SUNDAY : 06-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಧೈರ್ಯವಿದ್ದರೆ ಜಾತ್ಯತೀತ, ಸಮಾಜವಾದಿ ಪದ ತೆಗೆಯಿರಿ: ಖರ್ಗೆ ಸವಾಲು



**ಹೈದರಾಬಾದ್,ಜು.5–** ಭಾರತೀಯ ಸಂವಿಧಾನದ ಪೀಠಿಕೆಯಲ್ಲಿರುವ ಜಾತ್ಯತೀತ ಮತ್ತು ಸಮಾಜವಾದಿ ಪದಗಳನ್ನು ಮರು ಪರಿಶೀಲಿಸುವ ರಾಷ್ಟ್ರೀಯ ಸ್ವಯಂಸೇವಕ ಸಂಘದ ನಿಲುವಿನ ವಿರುದ್ಧ ವಾಗ್ದಾಳಿ ನಡೆಸಿರುವ ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ , ಧೈರ್ಯವಿದ್ದರೆ ಎರಡೂ ಪದಗಳನ್ನು ತೆಗೆದು ಹಾಕಿ ನೋಡೋಣ ಎಂದು ನೇರವಾಗಿಯೇ ಸವಾಲು ಹಾಕಿದ್ದಾರೆ

ಆರೆಸ್‌ಎಸ್ ಪ್ರಧಾನ ಕಾರ್ಯದರ್ಶಿ ದತ್ತಾತ್ರೇಯ ಹೊಸಬಾಳೆ ಮತ್ತು ಕೇಂದ್ರದಲ್ಲಿರುವ ಆಡಳಿತ ಭಾರತೀಯ ಜನತಾ ಪಕ್ಷದ ಉನ್ನತ ನಾಯಕರು ಸಂವಿಧಾನ ಪೀಠಿಕೆಯಿಂದ ಜಾತ್ಯತೀತ ಮತ್ತು ಸಮಾಜವಾದಿ ಪದಗಳನ್ನು ತೆಗೆದು ಹಾಕುವ ಪ್ರಯತ್ನ ಮಾಡಿ ,ಅದರ ಪರಿಣಾಮ ನೋಡುತ್ತೀರ ಎಂದು ಗುಡುಗಿದ್ದಾರೆತೆಲಂಗಾಣ ಪ್ರದೇಶ ಕಾಂಗ್ರೆಸ್ ಸಮಿತಿಯ ಕಾರ್ಯಕಾರಿ ಸಭೆಯಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆಸಂವಿಧಾನದಲ್ಲಿ ಸಮಾಜವಾದ ಮತ್ತು ಜಾತ್ಯತೀತತೆ ಎಂಬ ಪದಗಳನ್ನು ಸೇರಿಸಿದ್ದನ್ನು ಬಿಜೆಪಿ ಮತ್ತು ಆರ್ ಎಸ್ ಎಸ್ ನಾಯಕರು ಪ್ರಶ್ನಿಸಿದ್ದಾರೆ. ಜಾತ್ಯತೀತತೆ ಮತ್ತು ಸಮಾಜವಾದ ಎಂಬ ಪದಗಳನ್ನು ತುಂಬಾ ದ್ವೇಷಿಸುತ್ತಿದ್ದರೆ, ನಿಮ್ಮ ಸಂವಿಧಾನದಲ್ಲಿ ಅವುಗಳನ್ನು ಏಕೆ ಉಲ್ಲೇಖಿಸಲಾಗಿದೆ ಎಂದು ಪ್ರಶ್ನಿಸಿದ್ದಾರೆ

ದಿನಗಳ ಹಿಂದೆ, ಕೆಲವು ಆರೆಸ್ಸೆಸ್ ವ್ಯಕ್ತಿಗಳು ಸಂವಿಧಾನದಿಂದ ಜಾತ್ಯತೀತ ಮತ್ತು ಸಮಾಜವಾದಿ ಪದಗಳನ್ನು ತೆಗೆದುಹಾಕಬೇಕು ಎಂದು ಹೇಳಿದ್ದನ್ನು ಕೇಳಿದ್ದೆ.ಅವರಿಗೆ ಸವಾಲು ಹಾಕುತ್ತೇನೆ., ಅವರಾಗಿರಲಿ ಅಥವಾ ಕೇಂದ್ರದಲ್ಲಿ 2ನೇ ಪುಟಕ್ಕೆ

## ರಾಯಚೂರ ನಗರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್, ಡಾ.ಬಾಬು ಜಗಜೀವನರಾಮ್ ವೃತ್ತಗಳನ್ನು ವಿನೂತನ ರೀತಿಯಲ್ಲಿ ನಿರ್ಮಿಸಲು ಯೋಜನೆ

ಯುವ ಮಾರ್ಗ ಸುದ್ದಿ







**ರಾಯಚೂರು,ಜು.5–** ರಾಯಚೂರು ನಗರದಲ್ಲಿರುವ ಡಾ.ಬಿ. ಆರ್.ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನರಾಮ್ ಅವರ ವೃತ್ತಗಳ ಅಭಿವೃದ್ಧಿ ಹಾಗೂ ಉನ್ನತೀಕಣ ಕಾಮಗಾರಿಗಳ ಕುರಿತು ಚರ್ಚಿಸುವ ಮಹತ್ವದ ಪೂರ್ವಭಾವಿ ಸಭೆಯು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರ ಅಧ್ಯಕ್ಷತೆಯಲ್ಲಿ ಜುಲೈ 5 ರಂದು ನಡೆಯಿತು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮೊದಲಿಗೆ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಅಭಿವೃದ್ಧಿಯ ಪ್ರಾತ್ಯಕ್ಷಿಕೆಯ 3ಡಿ ಡಿಜೈನ್ ತೋರಿಸಲಾಯಿತು. ಈ ವೃತ್ತದಲ್ಲಿ ಯಾವುದೇ ಸಿಗ್ನಲ್ ಇರುವುದಿಲ್ಲ. ಡಾ.ಅಂಬೇಡ್ಕರ್ ಅವರ ಬದುಕಿನ ಗಾಥೆಯ ಸಂಕ್ಷಿಪ್ತ ಮಾಹಿತಿ, ಪುತ್ಥಳಿ, ಪಾರ್ಲಿಮೆಂಟ್ ಮತ್ತು ಸಂವಿಧಾನ ಗ್ರಂಥದ ಮಾದರಿಯೊಂದಿಗೆ ವೃತ್ತವು ವಿನೂತನವಾಗಿ ನಿರ್ಮಾಣವಾಗಲಿದೆ. ವೃತ್ತದಲ್ಲಿ ಗ್ರೀನ್ ಪಾರ್ಕ್, ರಕ್ಷಣೆಗಾಗಿ ಬ್ಯಾರಿಕೇಡ್ ವಾಲ್ ಸೇರಿದಂತೆ ವಿನೂತನ ರೀತಿಯಲ್ಲಿ ಸಿದ್ಧವಾಗುವ ವೃತ್ತದ ಮಾದರಿ ನಕ್ಷೆಯನ್ನು ಪ್ರದರ್ಶಿಸಲಾಯಿತು. ಇದೆ ವೇಳೆ ಮಾಸ್ಟರ್ ವಿಡಿಯೋವನ್ನು ಸಹ ಪ್ರದರ್ಶಿಸಲಾಯಿತು.

ದಿನಾಚರಣೆಯ ವೇಳೆ ಮುಖಂಡರು ಮನವಿ ಮಾಡಿದಂತೆ ಜಿಲ್ಲಾಡಳಿತವು ರಾಯಚೂರು ನಗರದಲ್ಲಿ ಡಾ.ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನರಾಮ್ ಅವರ ವೃತ್ತಗಳ ನವೀಕರಣಕ್ಕೆ ಜಿಲ್ಲಾಡಳಿತ ಮತ್ತು ಮಹಾನಗರ ಪಾಲಿಕೆಯು ಮುಂದಾಗಿರುವುದು ಅಭಿನಂದನಾರ್ಹ ಕಾರ್ಯವಾಗಿದೆ. ಇತರರಿಗೆ ಮಾದರಿಯಾಗುವ ರೀತಿಯಲ್ಲಿ ಎರಡೂ ವೃತ್ತಗಳನ್ನು ನಿರ್ಮಿಸಬೇಕು ಎಂದು ವಿವಿಧ ಸಂಘ ಸಂಸ್ಥೆಗಳ ಪ್ರಮುಖರು ಮನವಿ ಮಾಡಿದರು. 2ನೇ ಪುಟಕ್ಕೆ

## ಕಂದಾಯ ದಿನಾಚರಣೆಗೆ:ರಾಜ್ಯಕ್ಕೆ ಮಾದರಿಯಾಗಲು ಅಧಿಕಾರಿಗಳಿಗೆ ಕರೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಜು.5–**ತಾಲೂಕು ದಂಡಾಧಿಕಾರಿಗಳ ಕಾರ್ಯಾಲಯದಲ್ಲಿ ಕಂದಾಯ ದಿನಾಚರಣೆಯನ್ನು ಶನಿವಾರ ಆಚರಿಸಲಾಯಿತು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಪರಿಷತ್ತಿನ ಸಭಾ ನಾಯಕರಾದ ಎನ್.ಎಸ್. ಬೋಸರಾಜು ಮತ್ತು ಶಾಸಕರಾದ ಜಿ.ಹಂಪಯ್ಯ ನಾಯಕ್ ಸಾಹುಕಾರ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಎನ್.ಎಸ್.ಬೋಸರಾಜು, ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ಮತ್ತು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರ ದೂರದೃಷ್ಟಿಯಿಂದ ಗ್ರಾಮ ಲೆಕ್ಕಾಧಿಕಾರಿಯಿಂದ ಹಿಡಿದು ತಾಲೂಕು ಮಟ್ಟದ ಎಲ್ಲ ಅಧಿಕಾರಿಗಳು ಒಗ್ಗೂಡಿ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸಲು ಶ್ರಮಿಸಬೇಕು ಎಂದು ಕರೆ ನೀಡಿ ದರು.

ಕಂದಾಯ ಇಲಾಖೆಯ ನೌಕರರು ಪ್ರಸ್ತುತ ತಾಲೂಕು ಆರನೇ ಸ್ಥಾನದಲ್ಲಿರುವ ಮಾನ್ವಿಯನ್ನು ಮುಂಬರುವ ದಿನಗಳಲ್ಲಿ ರಾಜ್ಯಕ್ಕೆ ಮಾದರಿ ಕ್ಷೇತ್ರವಾಗಿಸಲು ಒಂದನೇ ಸ್ಥಾನಕ್ಕೆ ತರುವ ನಿಟ್ಟಿನಲ್ಲಿ ಶ್ರಮವಹಿಸಬೇಕು ಎಂದು ಸಚಿವರು ಮತ್ತು ಶಾಸಕರು ನೌಕರರಿಗೆ ಪ್ರೇರಣೆ ನೀಡಿದರು.

ಈ ಸಂದರ್ಭದಲ್ಲಿ ಮಾನ್ವಿ ಬ್ಲಾಕ್ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್, ಪಂಚ ಗ್ಯಾರಂಟಿಗಳ ಅಧ್ಯಕ್ಷರಾದ ಬಿ.ಕೆ. ಅಂಬರೀಶ್, ಸೈಯದ್ ಖಾಲಿದ್ ಖಾದ್ರಿ, ರೌಡೂರು ಮಹಾಂತೇಶ್ ಸ್ವಾಮಿ, ತಹಶೀಲ್ದಾರ್ ಭೀಮರಾಯ, ಸುರೇಶ ಕುರ್ಡಿಸೇರಿದಂತೆ ಕಂದಾಯ ಇಲಾಖೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಜು.10 ರಂದು ಹಡಪದ ಅಪ್ಪಣ್ಣ ಜಯಂತಿ : ತಹಶೀಲ್ದಾರ ಸತ್ಯಮ್ಮ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜು.5–** ಜುಲೈ 10 ರಂದು ಎಲ್ಲಾ ಸರಕಾರಿ ಕಛೇರಿಗಳಲ್ಲಿ ಕಡ್ಡಾಯವಾಗಿ ಶಿವಶರಣ ಹಡಪದ ಅಪ್ಪಣ್ಣ ಜಯಂತಿಯನ್ನು ಆಚರಿಸಿ ಎಂದು ತಹಶಿಲ್ದಾರ ಕುಮಾರಿ ಸತ್ಯಮ್ಮ ಹೇಳಿದರು.

ಪಟ್ಟಣದ ಮಿನಿ ವಿಧಾನಸೌಧದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ನಡೆದ ಹಡಪದ ಅಪ್ಪಣ್ಣ ನವರ ಜಯಂತಿ ಅಂಗವಾಗಿ ನಡೆದ ಪೂರ್ವ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಜಗತ್ತಿಗೆ ಸಮಾನತೆ ಸಾರಿದ ಬಸವಾದಿ ಶರಣರಲ್ಲಿ ಒಬ್ಬರಾದ ಹಡಪದ ಅಪ್ಪಣ್ಣ ಶರಣರು ಕೂಡ ಪ್ರಮುಖರಾಗಿದ್ದು, ಸರಕಾರದ ಆದೇಶದಂತೆ ಜುಲೈ 10 ರಂದು ತಹಶೀಲ್ದಾರ್ ಕಛೇರಿಯಲ್ಲಿ ಬೆಳಿಗ್ಗೆ 10 ಗಂಟೆಗೆ ಜಯಂತಿ ಆಚರಿಸಲಾಗುವುದು ಎಂದರು.

**ಸನ್ಮಾನ :** ಲಿಂಗಸುಗೂರು ಪಟ್ಟಣಕ್ಕೆ ತಹಶೀಲ್ದಾರರಾಗಿ ನೂತನವಾಗಿ ಅಧಿಕಾರ ವಹಿಸಿಕೊಂಡ ಸತ್ಯಮ್ಮರಿಗೆ ಹಡಪದ ಸಮಾಜದ ಮುಖಂಡರು ಸನ್ಮಾನಿಸಿ ಗೌರವಿಸಿದರು.

ಈ ಸಂಧರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ರವೀಂದ್ರ ಉಪ್ಪಾರ,ಪುರಸಭೆ ಮುಖ್ಯಾ ಧಿಕಾರಿ ರವಿ ಶಿರಗುಂಪಿ,ಸಾಮಾಜಿಕ ವಲಯ ಅರಣ್ಯಾಧಿಕಾರಿ ಭೀಮರಾಯ, ದೈಹಿಕ ಶಿಕ್ಷಣಾಧಿಕಾರಿ ಚನ್ನಬಸವ ಮೇಟಿ, ಕುಡಿಯುವ ನೀರು ನೈರ್ಮಲ್ಯ ಇಲಾಖೆ ಅಧಿಕಾರಿ ಪರಮೇಶ್ವರ್,ಹಡಪದ ಸಮಾಜದ ಜಿಲ್ಲಾಧ್ಯಕ್ಷ ಗದ್ದೆಪ್ಪ ಜಕ್ಕೆರಮಡು, ತಾಲೂಕಾಧ್ಯಕ್ಷ ಜಗನ್ನಾಥ ಚಿತ್ತಾಪುರ, ಪ್ರದಾನ ಕಾರ್ಯದರ್ಶಿ ಶರಣಬಸವ ಈಚನಾಳ,ಉಪಾಧ್ಯಕ್ಷ ಮುತ್ತಣ್ಣ ಗುಡಿಹಾಳ ಸೇರಿದಂತೆ ಸಮಾಜದ ಹಲವು ಮುಖಂಡರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

## ಜುಲೈ 9 ರಂದು ಕಾರ್ಮಿಕರ ಸಾರ್ವತ್ರಿಕ ಮುಷ್ಕರ ಯಶಸ್ವಿಗೆ ಕರೆ

ಯುವ ಮಾರ್ಗ ಸುದ್ದಿ




**ಲಿಂಗಸುಗೂರು,ಜು.5–** ಕಾರ್ಪೊರೇಟ್ ವಲಯಕ್ಕೆ ಮಣೆ ಹಾಕುವ ಸರಾಕರಗಳು ಕಾರ್ಮಿಕರ ಹಿತ ಕಾಯುವಲ್ಲಿ ವಿಫಲವಾಗುತ್ತಿವೆ. ಕಾರ್ಮಿಕರ ನ್ಯಾಯಬದ್ಧ ಹಕ್ಕಿಗಾಗಿ ಇದೇ ಜುಲೈ 09 ರಂದು ರಾಜ್ಯ ವ್ಯಾಪಿ ಮುಷ್ಕರ ಹಮ್ಮಿಕೊಂಡಿದ್ದು ಇದನ್ನು ಯಶಸ್ವಿಗೊಳಿಸಲು ಎಐಟಿಯುಸಿ ಜಿಲ್ಲಾ ಕಾರ್ಯದರ್ಶಿ ಕಾಂ.ಸಂಗಯ್ಯಸ್ವಾಮಿ ಚಿಂಚಿರಕಿ ಕರೆ ನೀಡಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿದ ಅವರು, 8 ಗಂಟೆ ಕೆಲಸದ ಅವಧಿ, ಖಾಯಂ ಕೆಲಸ, ಕೆಲಸಕ್ಕೆ ತಕ್ಕ ವೇತನ, ಸುರಕ್ಷತೆ, ಮುಷ್ಕರದ ಹಕ್ಕು, ಸಂಘ ಕಟ್ಟುವ ಹಕ್ಕು ಸೇರಿ ಇನ್ನಿಲ್ಲದ ಹಕ್ಕುಗಳನ್ನು ಇಲ್ಲದಾಗಿಸಿ ಕಾರ್ಮಿಕರನ್ನು ಗುಲಾಮರನ್ನಾಗಿಸಲು ಕೇಂದ್ರ ಸರಕಾರ ಕಾರ್ಪೊರೇಟ್ ಬಂಡವಾಳದ ಪರ ರೂಪಿಸಿರುವ ಕಾರ್ಮಿಕ ವಿರೋಧಿ ನಾಲ್ಕು ಸಂಹಿತೆಗಳನ್ನು ರದ್ದುಪಡಿಸಬೇಕು. ಗುತ್ತಿಗೆ, ಹೊರಗುತ್ತಿಗೆ, ನಿಗದಿತ ಅವಧಿಯ ಉದ್ಯೋಗ, ಅಪ್ರೆಂಟಿಸ್, ಟ್ರೈನಿ, ನ್ಯಾಪ್ಸ್ ಮುಂತಾದ ಹೆಸರಿನಲ್ಲಿ ಕಾರ್ಮಿಕರ ನೇಮಕ ನಿಲ್ಲಿಸಬೇಕು. ಗುತ್ತಿಗೆ ಮುಂತಾದ ಕಾರ್ಮಿಕರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ತಕ್ಷಣಕ್ಕೆ ಜಾರಿ ಮಾಡಬೇಕು. ಎನ್‌ಪಿಎಸ್ ಮತ್ತು ಯುಪಿಎಸ್ ರದ್ದುಪಡಿಸಿ, ಹಳೆಯ ಪಿಂಚಣ ಸ್ಕೀಂ ಮರುಸ್ಥಾಪಿಸಬೇಕು. ಸಾರ್ವಜನಿಕ ಉದ್ದಿಮೆ, ನಿಗಮ ಮತ್ತು ಇಲಾಖೆಗಳನ್ನು ಖಾಸಗೀಕರಿಸುವ ರಾಷ್ಟ್ರೀಯ ನಗದೀಕರಣ ಪೈಪ್‌ಲೈನ್ ಯೋಜನೆಯನ್ನು ರದ್ದುಪಡಿಸಬೇಕು. ಆದಿವಾಸಿಗಳು, ರೈತರು, ಸ್ಥಳೀಯ ಸಮುದಾಯದ ಉನ್ನತಿಗೆ ಗಣ ಗಾರಿಕೆ ಲಾಭದ ಶೇ.50 ಪಾಲು ಬಳಕೆ ಖಾತ್ರಿಗೊಳಿಸಲು ಖನಿಜ ಮತ್ತು ಲೋಹಗಳ ಗಣ ಗಾರಿಕೆಯ ಕಾನೂನಿಗೆ ತಿದ್ದುಪಡಿ ತರಬೇಕು. ಅರಣ್ಯ ಹಕ್ಕು ಕಾಯ್ದೆ ಕಟ್ಟುನಿಟ್ಟಾಗಿ ಅನುಷ್ಠಾನ 2ನೇಪುಟಕ್ಕೆ

## ಪರಿಸರ ದಿನಾಚರಣೆ: ತುರುಕನ ಡೋಣಿ ಗ್ರಾಮದಲ್ಲಿ ಸಸಿ ನೆಡುವ ಮೂಲಕ ಜಾಗೃತಿ

ಯುವ ಮಾರ್ಗ ಸುದ್ದಿ




**ರಾಯಚೂರು,ಜು.5–**ರಾಯಚೂರು ತಾಲೂಕಿನ ತುರುಕನಡೋಣಿ ಗ್ರಾಮದ ಸರ್ಕಾರಿ ಪ್ರೌಢ ಶಾಲೆ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಇಂದು ವಿಶ್ವ ಪರಿಸರ ದಿನಾಚರಣೆಯನ್ನು ಸಸಿ ನೆಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು. ಬಿ.ಆರ್.ಪಿ. ಹರೀಶ್ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಕಾರ್ಯಕ್ರಮಕ್ಕೆ ಸ್ವಾಮಿ ವಿವೇಕಾನಂದ ಯೂತ್ ಮೂವ್ಮೆಂಟ್ ಸಂಸ್ಥೆಯು ಕೈಜೋಡಿಸಿದ್ದು, ಎರಡು ಶಾಲೆಗಳಿಗೆ 40 ಸಸಿಗಳನ್ನು ವಿತರಿಸುವ ಮೂಲಕ ಪರಿಸರ ಜಾಗೃತಿಗೆ ಬೆಂಬಲ ನೀಡಿತು. ಕಳೆದ ಹತ್ತು ವರ್ಷಗಳಿಂದ ಈ ಸಂಸ್ಥೆಯು ಸರ್ಕಾರಿ ಶಾಲಾ ಮಕ್ಕಳಿಗೆ ವೈಯಕ್ತಿಕ ಸ್ವಚ್ಛತೆ, ಶೌಚಾಲಯದ ಮಹತ್ವ ಮತ್ತು ಕುಡಿಯುವ ನೀರಿನ ಕುರಿತು ಚಟುವಟಿಕೆಗಳನ್ನು ನಡೆಸುವ ಮೂಲಕ ಸ್ವಚ್ಛತೆ ಮತ್ತು ಪರಿಸರ ಜಾಗೃತಿ ಮೂಡಿಸುತ್ತಿದೆ. ಪ್ರತಿ ತಿಂಗಳು ಎರಡು ಶಾಲೆಗಳನ್ನು ಆಯ್ಕೆ ಮಾಡಿಕೊಂಡು ಉಚಿತ ಸಸಿಗಳನ್ನು ನೀಡುವ ಮೂಲಕ ಸಂಸ್ಥೆಯು ಪರಿಸರ ಸಂರಕ್ಷಣೆಗೆ ವಿಶೇಷ ಕಾಳಜಿ ವಹಿಸುತ್ತಿದೆ ಎಂದು ಬಿ.ಆರ್.ಪಿ. ಹರೀಶ್ ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಮುಖ್ಯ ಶಿಕ್ಷಕರಾದ ಭೀಮಯ್ಯ ನಾಯಕ, ಸಹ ಶಿಕ್ಷಕಿ ಶ್ರೀದೇವಿ, ಅತಿಥಿ ಶಿಕ್ಷಕ ವೃಂದದವರು, ಹಾಗೂ ಸ್ವಾಮಿ ವಿವೇಕಾನಂದ ಯೂತ್ ಮೂವ್ಮೆಂಟ್ ಸಂಸ್ಥೆಯ ಸಿಬ್ಬಂದಿಗಳಾದ ಭೀಮಯ್ಯ, ಈರಣ್ಣ ನಾಯಕ, ರಾಜೇಶ್, ಮತ್ತು ರಾಮಕೃಷ್ಣ ಅವರು ಉಪಸ್ಥಿತರಿದ್ದರು. ಶಾಲಾ ಮಕ್ಕಳು ಸಹ ಕಾರ್ಯಕ್ರಮದಲ್ಲಿ ಉತ್ಸಾಹದಿಂದ ಭಾಗವಹಿಸಿದ್ದರು.

ಮೊದಲನೇಯ ಪುಟದಿಂದ

## ರಾಯಚೂರ ನಗರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್, ಡಾ.ಬಾಬು ಜಗಜೀವನರಾಮ್ ವೃತ್ತಗಳನ್ನು ವಿನೂತನ ರೀತಿಯಲ್ಲಿ ನಿರ್ಮಿಸಲು ಯೋಜನೆ

ಹೋರಾಟಕ್ಕೆ ಸ್ಥಳವಕಾಶ ಕಲ್ಪಿಸಿ: ವೃತ್ತವು ಅದ್ಭುತವಾಗಿ ನಿರ್ಮಾಣವಾಗುತ್ತಿರುವುದಕ್ಕೆ ನಾವು ಅಭಿನಂದನೆ ತಿಳಿಸುತ್ತೇವೆ. ಡಾ.ಅಂಬೇಡ್ಕರ್ ಅಂದರೆ ನಮಗೆ ಹೋರಾಟದ ಸಂಕೇತವಾಗಿದೆ. ಹೀಗಾಗಿ ಡಾ.ಅಂಬೇಡ್ಕರ್ ಅವರ ಪುತ್ಥಳಿ ಎದುರಿಗೆ ಕನಿಷ್ಟ 500 ಜನರು ಕುಳಿತು ಪ್ರತಿಭಟಿಸುವುದಕ್ಕೆ ನೂತನ ವೃತ್ತದ ಬಳಿಯಲ್ಲಿ ಸ್ಥಳವಕಾಶ ಕಲ್ಪಿಸಬೇಕು ಎಂದು ಎಲ್ಲ ಮುಖಂಡರು ಸಭೆಯಲ್ಲಿ ಮನವಿ ಮಾಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಭವನ ನಿರ್ಮಿಸಿ: ಬಸ್ ನಿಲ್ದಾಣದ ಬಳಿಯಲ್ಲಿ ವಿನೂತನವಾಗಿ ಅಂಬೇಡ್ಕರ್ ಅವರ ವೃತ್ತ ನಿರ್ಮಾಣದ ಜೊತೆಗೆ ವೃತ್ತದ ಬಳಿಯಲ್ಲಿ ಖಾಲಿ ಇರುವ ಜಾಗದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಭವನ ನಿರ್ಮಿಸಬೇಕು. ನೂತನ ಜಿಲ್ಲಾಡಳಿತ ಭವನದ ಆವರಣದಲ್ಲಿ ಸಹ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಯನ್ನು ನಿರ್ಮಿಸಬೇಕು ಎಂದು ಮುಖಂಡರು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಜಿಲ್ಲಾಡಳಿತಕ್ಕೆ ಅಭಿನಂದನೆ ತಿಳಿಸಿದ ಗಣ್ಯರು: ರಾಯಚೂರು ಬಸ್ ನಿಲ್ದಾಣಕ್ಕೆ ಹೊಂದಿಕೊಂಡ ಕೋಟೆಯ ಕಂದಕವನ್ನು ಶುಚಿಗೊಳಿಸುವ ಕಾರ್ಯವು ಇದುವರೆಗೆ ನಡೆದೇ ಇರಲಿಲ್ಲ. ಈಗ ಕಂದಕದ ಸ್ವಚ್ಛತಾ ಕಾರ್ಯ ನಡೆಯುತ್ತಿರುವುದು ಇತಿಹಾಸವಾಗಿದೆ. ಹಾಗಾಗಿ ಜಿಲ್ಲಾಡಳಿತ ಮತ್ತು ಮಹಾನಗರ ಪಾಲಿಕೆಗೆ ಅಭಿನಂದಿಸುತ್ತೇವೆ ಎಂದು ಸಭೆಯಲ್ಲಿ ವಿವಿಧ ಸಂಘ ಸಂಸ್ಥೆಗಳ ಪ್ರಮುಖರು ತಿಳಿಸಿದರು.

ಜನರ ಸಹಕಾರ ಅಗತ್ಯ: ರಾಯಚೂರ ನಗರವು ಸುಂದರವಾಗಿ ನಿರ್ಮಾಣವಾಗಬೇಕು ಎಂಬುದು ನಮ್ಮ ಮುಖ್ಯ ಉದ್ದೇಶವಾಗಿದೆ. ರಾಯಚೂರ ನಗರಕ್ಕೆ ವಿಮಾನ ನಿಲ್ದಾಣ ಬರಲಿದೆ. ಜಾಗತಿಕವಾಗಿ ರಾಯಚೂರ ಗಮನ ಸೆಳೆಯುವ ನಿಟ್ಟಿನಲ್ಲಿ ಯೋಚಿಸಿ, ನಾನಾ ಯೋಜನೆಗಳ ಕಾರ್ಯರೂಪಕ್ಕೆ ಜಿಲ್ಲಾಡಳಿತವು ವಿವಿಧ ಇಲಾಖೆಗಳ ಸಹಯೋಗದಲ್ಲಿ ಮುಂದಾಗುತ್ತಿದೆ. ರಾಯಚೂರ ನಗರದಲ್ಲಿ ಈ ಎರಡೂ ವೃತ್ತಗಳ ನಿರ್ಮಾಣ ಕಾರ್ಯವು ಬರೀ ಜಿಲ್ಲಾಡಳಿತ, ಮಹಾನಗರ ಪಾಲಿಕೆಯ ಕಾರ್ಯವಲ್ಲ; ಇದಕ್ಕೆ ನಗರದ ಎಲ್ಲ ಸಂಘ ಸಂಸ್ಥೆಗಳ ಮುಖಂಡರು, ಗಣ್ಯರು, ಸಾರ್ವಜನಿಕರು ಸಹಕರಿಸಬೇಕು. ಇದು ಟೀಮ್ ವರ್ಕ್ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

15 ದಿನಗಳೊಳಗೆ ಟೆಂಡರ್: ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನರಾಮ್ ಅವರ ಜಯಂತಿ ಆಚರಣೆ ವೇಳೆಯಲ್ಲಿ ಪ್ರತಿ ವರ್ಷವೂ ದಲಿತ ಸಮುದಾಯಗಳ ಮುಖಂಡರು, ಡಾ. ಬಿ.ಆರ್.ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನರಾಮ್ ಅವರ ವೃತ್ತಗಳನ್ನು ಅಭಿವೃದ್ಧಿಗೊಳಿಸಬೇಕು ಎಂದು ಮನವಿ ಮಾಡುತ್ತಿರುವುದಕ್ಕೆ ಸ್ಪಂದಿಸಿ, ಇದೀಗ ಸಭೆ ಕರೆದು ಅಭಿಪ್ರಾಯ, ಸಲಹೆ ಪಡೆಯಲಾಗುತ್ತಿದೆ. ವಿವಿಧ ಸಂಘ ಸಂಸ್ಥೆಗಳ ಮುಖಂಡರ ಮನವಿಯಂತೆ ಎರಡೂ ವೃತ್ತಗಳ ಅಭಿವೃದ್ಧಿ ಹಿನ್ನೆಲೆಯಲ್ಲಿ 15 ದಿನಗಳೊಳಗೆ ಟೆಂಡರ್ ಕರೆದು ಮುಂದಿನ ಪ್ರಕ್ರಿಯೆ ನಡೆಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪಾತ್ರ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಎಂ. ಚಿದಾನಂದ, ಸಂಘ ಸಂಸ್ಥೆಗಳ ಪ್ರಮುಖರು, ಗಣ್ಯರಾದ ಎಂ.ವಿರುಪಾಕ್ಷಪ್ಪ, ರವಿ ಜಾಲ್ದಾರ್, ಪರಶುರಾಮ ಅರೋಲಿ, ಎಂ ಬಸವರಾಜ ಭಂಡಾರಿ, ಮಂಚಾಲ ಭೀಮಯ್ಯ, ಎಂ ವಸಂತಕುಮಾರ, ಜಿ ಮುದ್ದುಕೃಷ್ಣ, ಎಸ್ ನರಸಿಂಹಲು, ವಿಶ್ವನಾಥ ಹಟ್ಟಿ, ಎನ್ ಜಂಬಣ್ಣ, ರಂಗ ಮುನಿದಾಸ್, ಎಂ ಈರಣ್ಣ, ಭಾಸ್ಕರ್ ರಾಜ್, ಎಸ್ ಮಲ್ಲೇಶಿ ಕೊಲಿಮಿ, ಪ್ರಭು ನಾಯಕ, ಹನುಮೇಶ ಅರೋಲಿ, ವಿರುಪಾಕ್ಷಿ, ಭವನೇಶ ಹಾಗೂ ಇನ್ನಿತರ ಮುಖಂಡರು ಇದ್ದರು.

# ಧೈರ್ಯವಿದ್ದರೆ ಜಾತ್ಯತೀತ, ಸಮಾಜವಾದಿ ಪದ ತೆಗೆಯಿರಿ: ಖರ್ಗೆ ಸವಾಲು

ಅಧಿಕಾರದಲ್ಲಿರುವ ಬಿಜೆಪಿಯಾಗಿರಲಿ, ಅಥವಾ ಪ್ರಧಾನಿ ನರೇಂದ್ರ ಮೋದಿ ಅವರಾಗಲಿ ಈ ಎರಡೂ ಪದಗಳನ್ನು ತೆಗೆಯಲು ಪ್ರಯತ್ನಿಸಿ ನೋಡಿ ಎಂದು ಸವಾಲು ಹಾಕಿದ್ಧಾರೆ

ಜೂನ್ 27 ರಂದು,ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಆರೆಸ್ಎಸ್ ಮೇಲೆ ದಾಳಿ ಮಾಡಿ, ಸಂವಿಧಾನ ಬಯಸುವುದಿಲ್ಲ, ಮನುಸ್ಮೃತಿಯನ್ನು ದೇಶದ ಮೇಲೆ ಹೇರಿಕೆ ಮಾಡಲು ಬಯಸುತ್ತಿದೆ ಎಂದು ವಾಗ್ದಾಳಿ ನಡೆಸಿದ್ದರು. ಬಿಜೆಪಿ ಮತ್ತು ಆರ್ ಎಸ್ ಎಸ್ ಅಂಚಿನಲ್ಲಿರುವವರು ಮತ್ತು ಬಡವರನ್ನು ಗುಲಾಮರನ್ನಾಗಿ ಮಾಡುವ ಮೂಲಕ ಅವರ ಹಕ್ಕುಗಳನ್ನು ಉಲ್ಲಂಘಿಸುವ ಉದ್ದೇಶವನ್ನು ಹೊಂದಿದೆ. ಈ ಮೂಲಕ "ಆರೆಸ್ಎಸ್‌ನ ಮುಖವಾಡ ಮತ್ತೆ ಕಳಚಿದೆ" ಎಂದು ಹೇಳಿದ್ದರು

ಆರೆಸ್ಎಸ್-ಬಿಜೆಪಿಗೆ ಸಂವಿಧಾನ ಬೇಡ. ಅವರಿಗೆ ಮನುಸ್ಮೃತಿ ಬೇಕು. ಅವರು ಅಂಚಿನಲ್ಲಿರುವವರು ಮತ್ತು ಬಡವರ ಹಕ್ಕುಗಳನ್ನು ಕಸಿದುಕೊಂಡು ಮತ್ತೆ ಅವರನ್ನು ಗುಲಾಮರನ್ನಾಗಿ ಮಾಡುವ ಗುರಿಯನ್ನು ಹೊಂದಿದ್ದಾರೆ. ಸಂವಿಧಾನದಂತಹ ಪ್ರಬಲ ಅಸ್ತ್ರವನ್ನು ಅವರಿಂದ ಕಸಿದುಕೊಳ್ಳುವುದು ಅವರ ನಿಜವಾದ ಕಾರ್ಯಸೂಚಿಯಾಗಿದೆ" ಎಂದು ವಾಗ್ದಾಳಿ ನಡೆಸಿದ್ಧಾರೆ

ಇಂದಿರಾ ಗಾಂಧಿ ರಾಷ್ಟ್ರೀಯ ಕಲಾ ಕೇಂದ್ರ, ಅಂಬೇಡ್ಕರ್ ಅಂತರರಾಷ್ಟ್ರೀಯ ಕೇಂದ್ರ ಜಂಟಿಯಾಗಿ ಆಯೋಜಿಸಿದ್ದ ಡಾ. ಅಂಬೇಡ್ಕರ್ ಅಂತರರಾಷ್ಟ್ರೀಯ ಕೇಂದ್ರದಲ್ಲಿ ತುರ್ತು ಪರಿಸ್ಥಿತಿಯ 50 ನೇ ವಾರ್ಷಿಕೋತ್ಸವದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ದತ್ತಾತ್ರೇಯ ಹೊಸಬಾಳೆ ಅವರು ಭಾರತೀಯ ಸಂವಿಧಾನದ ಪೀಠಿಕೆಯಲ್ಲಿ "ಸಮಾಜವಾದಿ" ಮತ್ತು "ಜಾತ್ಯತೀತ" ಪದಗಳನ್ನು ಸೇರಿಸುವ ನ್ಯಾಯಸಮ್ಮತತೆ ಪ್ರಶ್ನಿಸಿದ ನಂತರ ಕಾಂಗ್ರೆಸ್ ಮತ್ತು ಬಿಜೆಪಿ ನಾಯಕರ ನಡುವೆ ಆರೋಪ ಪ್ರತ್ಯಾರೋಪ ನಡೆಯುತ್ತಿದೆ

# ಜುಲೈ 9 ರಂದು ಕಾರ್ಮಿಕರ ಸಾರ್ವತ್ರಿಕ ಮುಷ್ಕರ ಯಶಸ್ವಿಗೆ ಕರೆ

ಮಾಡಬೇಕು. ಅರಣ್ಯ ನಿವಾಸಿಗಳನ್ನು ತೆರವುಗೊಳಿಸಲು ಕೇಂದ್ರ ಸರಕಾರಕ್ಕೆ ಅನುಮತಿ ನೀಡುವ ತಿದ್ದುಪಡಿಗಳನ್ನು ಹಿಂಪಡೆಯಬೇಕು. ರೈತರ ಒಪ್ಪಿಗೆ ಇಲ್ಲದೇ ಬಲವಂತವಾಗಿ ಭೂ ಸ್ವಾಧೀನ ಹಾಗೂ 3 ಕರಾಳ ಕೃಷಿ ಕಾಯ್ದೆ ತಿದ್ದುಪಡಿಗಳನ್ನು ರಾಜ್ಯ ಸರಕಾರ ವಾಪಸ್ ಪಡೆಯಬೇಕು. ಬೆಂಗಳೂರಿನಲ್ಲಿ ಪ್ರತಿಭಟನೆ ಮತ್ತು ಮೆರವಣ ಗೆಗೆ ಇರುವ ನಿರ್ಬಂಧವನ್ನು ಹಿಂಪಡೆಯಬೇಕು. ರಾಯಚೂರಲ್ಲೇ ಏಮ್ಸ್ ಸಂಸ್ಥೆ ಸ್ಥಾಪಿಸಲು ಸರಾಕರ ಮುಂದಾಗಬೇಕು ಸೇರಿ ನಾನಾ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕಟ್ಟಡ ಕಾರ್ಮಿಕ ಸಂಘದ ಜಿಲ್ಲಾ ಪ್ರದಾನ ಕಾರ್ಯದರ್ಶಿ ಮಹ್ಮದ್ ಜಾಫರ್, ಎಐಟಿಯುಸಿ ತಾಲೂಕು ಸಂಚಾಲಕ ಸಬ್ಜಲಿಸಾಬ, ಅಂಗನವಾಡಿ ಫೆಡರೇಶನ್‌ನ ಅದ್ಯಕ್ಷೆ ಮಹಾದೇವಿ, ಸುವರ್ಣ, ನಾಗರತ್ನ, ನೀಲಮ್ಮ ಇದ್ದರು.

# ಸಿಯುಕೆ ಆವರಣದಲ್ಲಿ ಎನ್‌ಎಸ್‌ಎಸ್ ಸ್ವಚ್ಛತಾ ಆಂದೋಲನ




**ಕಲಬುರಗಿ,ಜು.5–** ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಎನ್‌ಎಸ್‌ಎಸ್ ಘಟಕವು ವಿಶ್ವವಿದ್ಯಾಲಯದ ಕ್ಯಾಂಪಸನಲ್ಲಿರುವ ಕಾವೇರಿ ಹಾಸ್ಟೆಲ್‌ನ ಮುಂಭಾಗ ಆವರಣದಲ್ಲಿ ಸ್ವಚ್ಛತೆಯ ಆಂದೋಲನವನ್ನು ಆಯೋಜಿಸಿತು.ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ವಿದ್ಯಾರ್ಥಿ ಸ್ವಯಂಸೇವಕರನ್ನು ಉದ್ದೇಶಿಸಿ ಮಾತನಾಡಿ, ವಿಶ್ವವಿದ್ಯಾನಿಲಯದ ಸ್ವಚ್ಛತೆಯನ್ನು ಕಾಪಾಡಿಕೊಳ್ಳಲು ಮತ್ತು ಅದರ ಸುಸ್ಥಿರ ಅಭಿವೃದ್ಧಿಗೆ ಕೊಡುಗೆ ನೀಡುವಲ್ಲಿ ಎನ್‌ಎಸ್‌ಎಸ್ ವಹಿಸಬಹುದಾದ ನಿರ್ಣಾಯಕ ಪಾತ್ರವನ್ನು ಒತ್ತಿಹೇಳಿದರು. ಸಮಾಜದ ಬಗೆಗಿನ ಅವರ ಜವಾಬ್ದಾರಿಗಳನ್ನು ಗುರುತಿಸಲು ಮತ್ತು ಸ್ವಯಂಸೇವಕ ಕೆಲಸದ ಮೂಲಕ ಅರ್ಥಪೂರ್ಣ ಕೊಡುಗೆಗಳನ್ನು ನೀಡಲು ಅವರು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಿದರು.ಅವರು ಪ್ಲಾಸ್ಟಿಕ್ ತ್ಯಾಜ್ಯದ ಅಪಾಯಗಳನ್ನು ಎತ್ತಿ ತೋರಿಸಿದರು, ವಿಶೇಷವಾಗಿ ಬಾಟಲಿಗಳು ಮತ್ತು ಸಾಗಿಸುವ ಚೀಲಗಳಂತಹ ವಿಘಟಿಸಲಾಗದ ವಸ್ತುಗಳು, ಇದು ಪರಿಸರಕ್ಕೆ ಗಮನಾರ್ಹ ಅಪಾಯವನ್ನುಂಟುಮಾಡುತ್ತದೆ. ಸ್ವಯಂಸೇವಕ ತಂಡದ ನೇತೃತ್ವವನ್ನು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಮತ್ತು ಕುಲಸಚಿವರಾದ ಪ್ರೊ. ಆರ್.ಆರ್. ಬಿರಾದರ್ ನೇತೃತ್ವ ವಹಿಸಿದ್ದರು. ಈ ಕಾರ್ಯಕ್ರಮಕ್ಕೆ ಶಿಸ್ತು ಸಮಿತಿ ಮುಖ್ಯಸ್ಥ ಪ್ರೊ. ವೇಂಕಟರಮಣ ದೊಡ್ಡಿ, ಪ್ರೊ .ರಾಘವಯ್ಯ, ಪ್ರೊ.ಜಿ.ಆರ್.ಅಂಗಡಿ ಮತ್ತು ಹಲವಾರು ಬೋಧಕ ಹಾಗು ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿ ಸ್ವಯಂ ಸೇವಕರೊಂದಿಗೆ ಹಾಸ್ಟೆಲ್ ಆವರಣದ ಸುತ್ತಲೂ ಹರಡಿರುವ ಪ್ಲಾಸ್ಟಿಕ್ ಮತ್ತು ಇತರ ತ್ಯಾಜ್ಯವನ್ನು ಸಂಗ್ರಹಿಸಿದರು. ಪರಿಸರ ಸ್ವಚ್ಛತೆಯ ಆಂದೋಲನವನ್ನು ಎನ್‌ಎಸ್‌ಎಸ್ ಪ್ರೋಗ್ರಾಂ ಆಫೀಸರ್ ಡಾ. ಪ್ರೊ.ರೆಡ್ಡಿ ಬುಚಿರೆಡ್ಡಿ ಮತ್ತು ಎನ್‌ಎಸ್‌ಎಸ್ ಸಂಯೋಜಕ ಡಾ. ಶಿವಂ ಮಿಶ್ರಾ ಯಶಸ್ವಿಯಾಗಿ ಸಂಯೋಜಿಸಿದರು.

# ಲಯನ್ಸ್ ಕ್ಲಬ್ ಶಾಲೆಯಲ್ಲಿ ಡೆಂಗೆ ವಿರೋಧಿ ಮಾಸಾಚರಣೆ



**ರಾಯಚೂರು,ಜು.5–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಘಟಕದ ಸಹಯೋಗದೊಂದಿಗೆ ಡೆಂಗೆ ವಿರೋಧಿ ಮಾಸಾಚರಣೆಯು ಲಯನ್ಸ್ ಕ್ಲಬ್ ಶಾಲೆಯಲ್ಲಿ ನಡೆಯಿತು.

ಕೀಟ ಶಾಸ್ತ್ರಜ್ಞರಾದ ಗಂಗೋತಿ ಅವರು ಮಾತನಾಡಿ, ಜಗತ್ತಿನಲ್ಲಿ ಹಲವಾರು ಜಾತಿಯ ಸೊಳ್ಳೆಗಳಿವೆ. ಆದರೆ ಈಡೀಸ್ ಈಜಿಪ್ಟ್, ಅನಾಫಿಲಿಸ್, ಕ್ಯೂಲೆಕ್ಸ ಈ ಮೂರು ಸೊಳ್ಳೆಗಳು ಮನುಷ್ಯರನ್ನು ಹೆಚ್ಚಿಗೆ ಕಾಡುತ್ತವೆ. ಈಡೀಸ್ ಈಜಿಪ್ಟೈ ಎಂಬ ಹೆಣ್ಣು ಸೋಂಕಿತ ಸೊಳ್ಳೆ ಕಚ್ಚುವುದರಿಂದ ಡೆಂಗೆ ಜ್ವರ ಬರುತ್ತದೆ. ನೀರಿನ ಪರಿಕರಗಳಲ್ಲಿ, ಘನ ತ್ಯಾಜ್ಯ ವಸ್ತುಗಳಲ್ಲಿ, ಮಳೆ ನೀರು ನಿಂತು ಸೊಳ್ಳೆ ಉತ್ಪತ್ತಿಯಾಗುತ್ತವೆ. ನಿಂತ ನೀರು ಸೊಳ್ಳೆ ಉತ್ಪತ್ತಿ ತಾಣಗಳಾಗಿವೆ ಎಂದು ತಿಳಿಸಿದರು. ಈ ವೇಳೆ ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಸರೋಜ.ಕೆ ಅವರು ಮಾತನಾಡಿ, ಡೆಂಗೆ ಜ್ವರಕ್ಕೆ ಚಿಕಿತ್ಸೆ ಇರುವುದಿಲ್ಲ. ರೋಗದ ಲಕ್ಷಣಗಳ ಅನುಗುಣವಾಗಿ ಚಿಕಿತ್ಸೆ ನೀಡಲಾಗುತ್ತದೆ. ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು ಎಂದರು. ಸ್ವಯಂರಕ್ಷಣಾ ವಿಧಾನ ಅನುಸರಿಸಬೇಕು. ಮೈ ತುಂಬಾ ಬಟ್ಟೆ ಧರಿಸಬೇಕು. ಸೊಳ್ಳೆ ಪರದೆ ಉಪಯೋಗಿಸಬೇಕು. ಕಿಟಕಿಗಳಿಗೆ ಜಾಲರಿ ಅಳವಡಿಸಬೇಕು, ಗುಡ್ ನೈಟ್, ಸೊಳ್ಳೆ ಹೊಡೆಯುವ ಬ್ಯಾಟ್ ಉಪಯೋಗಿಸಬೇಕು. ಮನೆಯಲ್ಲಿರುವ ನೀರಿನ ಪರಿಕರಗಳು ವಾರಕ್ಕೊಮ್ಮೆ ತೊಳೆದು ಒಣಗಿಸಬೇಕು. ಯಾವುದೇ ಜ್ವರ ಇರಲಿ ಹತ್ತಿರದ ಆಸ್ಪತ್ರೆಗೆ ಹೋಗಿ ರಕ್ತ ಪರೀಕ್ಷೆ ಮಾಡಿಸಿಕೊಳ್ಳಬೇಕೆಂದರು. ಈ ವೇಳೆ ಮಲೇರಿಯಾ ತಾಂತ್ರಿಕ ಮೇಲ್ವಿಚಾರಕರಾದ ಸಂಧ್ಯಾ ನಾಯಕ ಅವರು ಮಾತನಾಡಿ, ಸಮುದಾಯದಲ್ಲಿ ಪ್ರತಿಯೊಬ್ಬರು ಮನೆಯ ಒಳಾಂಗಣ ಹಾಗೂ ಹೊರಾಂಗಣ ಸುತ್ತಲಿನ ಪರಿಸರದ ಸ್ವಚ್ಚತೆಗೆ ಆದ್ಯತೆ ಕೊಡಬೇಕು. ಉತ್ತಮ ಪರಿಸರವಿದ್ದಲ್ಲಿ ಆರೋಗ್ಯದಿಂದಿರಬಹುದು ಎಂದರು.

ಇದೇ ಸಂದರ್ಭದಲ್ಲಿ ಶಾಲೆಯ ಪ್ರಾಂಶುಪಾಲರಾದ ದತ್ತಾತ್ರೇಯ, ದೈಹಿಕ ಶಿಕ್ಷಣ ಶಿಕ್ಷಕ ರಾಜರಾಮ, ಆರೋಗ್ಯ ನಿರೀಕ್ಷಣಾಧಿಕಾರಿ ಅರುಣ ಸೇರಿದಂತೆ ಶಾಲಾ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಜುಲೈ 12ರಂದು ಜಿಲ್ಲೆಯಲ್ಲಿ ರಾಷ್ಟ್ರೀಯ ಲೋಕ ಅದಾಲತ್: ನ್ಯಾ.ಹೆಚ್.ಎ.ಸಾತ್ವಿಕ್




**ರಾಯಚೂರು,ಜು.5–**ಜಿಲ್ಲೆಯಲ್ಲಿ ಜುಲೈ 12ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗುತ್ತಿದ್ದು, ಸಾರ್ವಜನಿಕರು, ಕಕ್ಷಿಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸದಾವಕಾಶವಾಗಿದೆ ಎಂದು ಗೌರವಾನ್ವಿತ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ತಿಳಿಸಿದ್ದಾರೆ.

ಅಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲೆಯ ಎಲ್ಲಾ ತಾಲೂಕು ನ್ಯಾಯಾಲಯ ಹಾಗೂ ಜಿಲ್ಲಾ ನ್ಯಾಯಾಲಯದಲ್ಲಿ ರಾಷ್ಟ್ರೀಯ ಲೋಕ ಅದಾಲತ್‌ನ್ನು ನಿಗದಿಪಡಿಸಲಾಗಿದ್ದು, ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಸಿವಿಲ್ ಮತ್ತು ಕ್ರಿಮಿನಲ್ (ರಾಜಿಯಾಗುವಂತಹ) ಮೊಕದ್ದಮೆಗಳು, ಅಲ್ಲದೇ ಮೋಟಾರ ವಾಹನ ಕಾಯ್ದೆ, ಕುಟುಂಬ ನ್ಯಾಯಾಲಯದ ಪ್ರಕರಣಗಳು ಮತ್ತು ಎಲ್ಲಾ ಬಗೆಯ ಪ್ರಕರಣಗಳನ್ನು ಲೋಕ ಅದಾಲತ್ ಮುಖಾಂತರ ಇತ್ಯರ್ಥಗೊಳಿಸಲಾಗುವುದು. ಆದ್ದರಿಂದ ವಕೀಲರು, ಕಕ್ಷಿದಾರರು, ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಷ್ಟ್ರೀಯ ಲೋಕ ಅದಾಲತ್ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಸದಾವಕಾಶವನ್ನು ಒದಗಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೋಲಿ ಕಬ್ಬಲಿಗ ಸಮಾಜ ಎಸ್‌ಟಿಗೆ ಸೇರಿಸಲು ಕೇಂದ್ರಕ್ಕೆ ನಿಯೋಗ: ಸಚಿವ ಪ್ರಿಯಾಂಕ್ ಖರ್ಗೆ



**ಕಲಬುರಗಿ,ಜು.5–**ಕೋಲಿ ಹಾಗೂ ಕಬ್ಬಲಿಗ ಸಮಾಜವನ್ನು ಎಸ್‌ಟಿ ಪಂಗಡಕ್ಕೆ ಸೇರಿಸುವಂತೆ ಕೇಂದ್ರವನ್ನು ಒತ್ತಾಯಿಸಿ ಈಗಾಗಲೇ ಪತ್ರ ಬರೆದಿದ್ದೇನೆ. ಈಗ ಕೇಂದ್ರದಲ್ಲಿ ಅಧಿಕಾರದಲ್ಲಿ ನಮ್ಮ ಪಕ್ಷ ಇಲ್ಲ. ಆದರೂ ಕೂಡಾ ಸಚಿವ ಶಿವರಾಜ್ ತಂಗಡಗಿ ಅವರೊಂದಿಗೆ ಚರ್ಚಿಸಿ ಕೇಂದ್ರ ಎತ್ತಿರುವ ಲೋಪ ಸರಿಪಡಿಸಲು ಕೇಂದ್ರಕ್ಕೆ ನಿಯೋಗ ತೆಗೆದುಕೊಂಡು ಹೋಗುವುದಾಗಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಕಲಬುರಗಿ ತಾಲೂಕಿನ ಹೊನ್ನ ಕಿರಣಗಿ ಗ್ರಾಮದಲ್ಲಿ ರೂ 50 ಲಕ್ಷದಲ್ಲಿ ನಿರ್ಮಾಣಗೊಂಡಿರುವ ನಿಜಶರಣ ಅಂಬಿಗರ ಚೌಡಯ್ಯ ರೈತ ಭವನ ಉದ್ಘಾಟನೆ ಹಾಗೂ ರೂ 2.40 ಕೋಟಿ ವೆಚ್ಚದಲ್ಲಿ ಕೈಗೆತ್ತಿಗೊಳ್ಳಲಿರುವ ವಿವಿಧ ಕಾಮಗಾರಿಗೆ ಅಡಿಗಲ್ಲು ನೆರವೇರಿಸಿ ಅವರು ಮಾತನಾಡುತ್ತಿದ್ದರು. ಸಂವಿಧಾನದ ಪೀಠಿಕೆಯಲ್ಲಿ ಆರ್ಥಿಕ ಹಾಗೂ ಸಾಮಾಜಿಕ ಸಮಾನತೆ ಉಲ್ಲೇಖಿಸಲಾಗಿದೆ. ಅದರಂತೆ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಾಗಲೆಲ್ಲ ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನು ಮುಖ್ಯವಾಹಿನಿಗೆ ತರಲು ಪ್ರಾಮಾಣಿಕ ಪ್ರಯತ್ನ ಮಾಡುತ್ತದೆ ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿಯೇ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ಸ್ಥಾಪನೆಯಾಗಿದೆ. ಹಿಂದಿನ ಬಿಜೆಪಿ ಸರ್ಕಾರ ಕೋಲಿ ಅಭಿವೃದ್ಧಿ ನಿಗಮ ಎಂದು ಹೆಸರಿಟ್ಟಿತ್ತು. ಆದರೆ ಕೋಲಿ ಕಬ್ಬಲಿಗ ಮೊಗವೀರ ಇತ್ಯಾದಿ ಒಳಪಂಗಡಗಳಿಂದ ಕರೆಯ ಲ್ಪಡುತ್ತಿರುವುದರಿಂದ ಕೋಲಿ ಅಭಿವೃದ್ಧಿ ನಿಗಮವನ್ನು ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ಎಂದಿ ಬದಲಾಯಿಸಿ ಎಲ್ಲ ಒಳ ಪಂಗಡಗಳಿಗೆ ನ್ಯಾಯ ಒದಗಿಸಲಾಗಿದೆ ಎಂದರು. ಚೌಡದಾನಪುರ ಕ್ಷೇತ್ರದ ಅಭಿವೃದ್ಧಿಗೆ ತಾವು ಬದ್ಧರಾಗಿ ರುವುದಾಗಿ ಹೇಳಿದ ಸಚಿವರು, ಬೆಂಗಳೂರಿನಲ್ಲಿ ಸೂಕ್ತ ಸ್ಥಾನದಲ್ಲಿ ಅಂಬಿಗರ ಚೌಡಯ್ಯ ಮೂರ್ತಿ ಸ್ಥಾಪನೆಗೆ ಕ್ರಮವಹಿಸಲಾಗುವುದು ಎಂದರು.

ಜಿಲ್ಲಾ ಅಂಬಿಗರ ಚೌಡಯ್ಯ ಭವನವನ್ನು ರೂ 4 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದೆ. ಸಿಎಂ ಹಾಗೂ ಖರ್ಗೆ ಸಾಹೇಬರೊಂದಿಗೆ ಮಾತನಾಡಿ ಒಂದು ದಿನ ನಿಗದಿಪಡಿಸಿ ಉದ್ಘಾಟನೆ ಮಾಡಲಾಗುವುದು ಎಂದರು. ಯುವಕರು ಅಂಬಿಗರ ಚೌಡಯ್ಯ ಅವರನ್ನು ಸರಿಯಾಗಿ ಅರ್ಥ ಮಾಡಿಕೊಳ್ಳಬೇಕು ಎಂದು ಮನವಿ ಮಾಡಿದ ಸಚಿವರು, ಅಂಬಿಗರ ಚೌಡಯ್ಯ ಅವರನ್ನು ನಿಜಶರಣ ಎಂದು ಕರೆ ಯುತ್ತಾರೆ. ಅವರ ವಚನಗಳ ನೈಜ ವಾಸ್ತವಾಂಶದಿಂದ ಕೂಡಿ ರುತ್ತವೆ ಎಂದರು.

ಧರ್ಮದ ವಿಷಬೀಜ ಬಿತ್ತುವ ಮೂಲಕ ಯುವಕರ ಭವಿಷ್ಯ ಹಾಳುಮಾಡುತ್ತಿದ್ದಾರೆ. ಈ ಷಡ್ಯಂತ್ರಕ್ಕೆ ಈಡಿಗರು, ಮೊಗವೀರರ ಸಮುದಾಯದ ಯುವಕರು ಒಳಗಾಗುತ್ತಿದ್ದಾರೆ. ತಮ್ಮ ಮಕ್ಕಳನ್ನು ವಿದೇಶಕ್ಕೆ ವಿದ್ಯಾಭ್ಯಾಸಕ್ಕೆ ಕಳಿಸುವ ಬಿಜೆಪಿ ನಾಯಕರು ಧರ್ಮ ರಕ್ಷಣೆಗೆ ಬಡವರ ಮಕ್ಕಳ ಬಳಸುತ್ತಾರೆ. ಈ ಬಗ್ಗೆ ಯುವಕರು ಎಚ್ಚರದಿಂದ ಇರಬೇಕು ಎಂದು ಮನವಿ ಮಾಡಿದರು. ಅಧ್ಯಕ್ಷತೆ ವಹಿಸಿದ್ದ ಶಾಸಕ ಎಂ ವೈ ಪಾಟೀಲ್ ಮಾತನಾಡಿ ಪ್ರಿಯಾಂಕ್ ಖರ್ಗೆ ಒಬ್ಬ ವ್ಯಕ್ತಿಯಲ್ಲ ಅವರೊಬ್ಬ ಶಕ್ತಿ. ಚಿಕ್ಕ ವಯಸ್ಸಿನಲ್ಲಿಯೇ ಐಟಿಬಿಟಿ ಹಾಗೂ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಖಾತೆ ವಹಿಸಿಕೊಂಡು ಅಮೋಘ ಸಾಧನೆ ಮಾಡಿದ್ದಾರೆ ಎಂದು ಶ್ಲಾಘಿಸಿದರು. ಎಂಎಲ್‌ಸಿ ತಿಪ್ಪಣ್ಣಪ್ಪ ಕಮಕನೂರು, ಶಿವಾನಂದ್ ಪಾಟೀಲ್, ಮಶಾಕ್ ಪಟೇಲ್, ಸೇರಿದಂತೆ ಹಲವರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಗಾಂಧಿ ಕುಟುಂಬದ ವಿರುದ್ಧ ಕೇಂದ್ರ ಸರ್ಕಾರ ದ್ವೇಷ ರಾಜಕಾರಣ : ಬಿ.ಕೆ.ಹರಿಪ್ರಸಾದ್

**ಬೆಂಗಳೂರು, ಜು.5–** ಸಂಸ್ಥೆಯ ಯಾವುದೇ ಲಾಭಾಂಶ ಪಡೆಯದ ಸಂಸ್ಥೆ ನಿರ್ದೇಶಕರಿಗೆ ವೇತನವೂ ನೀಡದಂತಹ ಯಂಗ್ ಇಂಡಿಯಾ ಟ್ರಸ್ಟ್‌ನಲ್ಲಿ ಹಗರಣವಾಗಿದೆ ಎಂದು ಪ್ರಕರಣದಾಖಲಿಸುವುದು ದ್ವೇಷ ರಾಜಕಾರಣದ ಪರಮಾವಧಿ ಎಂದು ಹಿರಿಯ ಕಾಂಗ್ರೆಸಿಗ ಬಿ.ಕೆ.ಹರಿಪ್ರಸಾದ್ ಹೇಳಿದ್ದಾರೆ.

ತಮ್ಮ ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಪ್ರತಿಕ್ರಿಯಿಸಿರುವ ಅವರು, ಬಿಜೆಪಿ ಪಕ್ಷದ ಅಂಗಸಂಸ್ಥೆಗಳಂತೆ ವರ್ತಿಸುತ್ತಿರುವ ಇ.ಡಿ ಸಂಸ್ಥೆ, ನ್ಯಾಷನಲ್ ಹೆರಾಲ್ಡ್ ವಿಷಯದಲ್ಲಿ ಗಾಂಧಿ ಕುಟುಂಬವನ್ನು ನಡೆಸಿಕೊಳ್ಳುತ್ತಿರುವ ರೀತಿ ದ್ವೇಷ ರಾಜಕೀಯ ಮಾತ್ರವಲ್ಲ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅಸಾಮಾನ್ಯವಾದದ್ದು ಎಂದು ತಿಳಿಸಿದ್ದಾರೆ.ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಅಕ್ರಮ ಹಣ ವ್ಯವಹಾರ ನಡೆದಿದೆ ಎಂಬುವುದು ಕಪೋಲಕಲ್ಪಿತ ಆರೋಪಗಳು ಮಾತ್ರವಲ್ಲದೇ, ಸಾಕ್ಷಾಧಾರಗಳಿಲ್ಲದೇ ಇ.ಡಿ ನಡೆಸುತ್ತಿರುವ ವಾದ ಸುಳ್ಳಿಗೆ ಸುಳ್ಳನ್ನೇ ಸಾಕ್ಷಿಗಳಂತೆ ಪ್ರತಿಬಿಂಬಿಸುತ್ತಿದೆ ಎಂದು ಹೇಳಿದ್ದಾರೆ.

ಯಂಗ್ ಇಂಡಿಯಾ ಒಂದು ಲಾಭ ರಹಿತ ಸಂಸ್ಥೆ ಎಂಬುದು ಸ್ಪಷ್ಟ, ಲಾಂಭಂಶವನ್ನು ಪಡೆಯದೆ ಸಾರ್ವಜನಿಕ ಸೇವಾ ಉದ್ದೇಶದಿಂದ ಸ್ಥಾಪಿತವಾದ ಸಂಸ್ಥೆ. ಯಂಗ್ ಇಂಡಿಯಾದ ನಿರ್ದೇಶಕರಾಗಲಿ, ಷೇರುದಾರರಾಗಲಿ ಯಾವುದೇ ಲಾಂಭಂಶವನ್ನು ಪಡೆಯುವಂತಿಲ್ಲ ಎಂಬ ನಿಯಮವಿದೆ ಹಾಗೂ ಷೇರುದಾರರಿಗೆ ಯಾವುದೇ ಸಂಬಳವನ್ನು ಕೂಡ ನೀಡಲಾಗುವುದಿಲ್ಲ. ಹಾಗಿದ್ದೂ ಕೋಟ್ಯಂತರ ಅವ್ಯವಹಾರವಾಗಿದೆ ಎಂದು ಇ.ಡಿ ಇಲಾಖೆ ಆರೋಪಿಸಲು ಹೇಗೆ ಸಾಧ್ಯ? ಎಂದು ಪ್ರಶ್ನಿಸಿದ್ದಾರೆ.



ಒಂದು ಪೈಸೆಯನ್ನೂ ಅಕ್ರಮವಾಗಿ ನ್ಯಾಷನಲ್ ಹೆರಾಲ್ಡ್ ಜೊತೆಗೆ ಯಂಗ್ ಇಂಡಿಯಾ ಸಂಸ್ಥೆ ವಹಿವಾಟು ನಡೆಸಿಲ್ಲ. ಯಾವ ಆಸ್ತಿಯನ್ನು ವಶಕ್ಕೂ ಪಡೆದುಕೊಂಡಿಲ್ಲ. 2013 ರಿಂದ 2025ರವರೆಗೆ ಕಾಲಕ್ಕೆ ತಕ್ಕಂತೆ ಇ.ಡಿ ಇಲಾಖೆ ತನ್ನ ವಾದವನ್ನು ಬದಲಾಯಿಸುತ್ತಾ ಪೊಳ್ಳುವಾದ ಮಂಡಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಬಿಜೆಪಿ ನಾಯಕನ ಪುರಾವೇ ಇಲ್ಲದ ದೂರಿನ ನಂತರ ಇಲ್ಲಿವರೆಗೂ ಯಾವುದೇ ತನಿಖಾ ಅಧಿಕಾರಿ ದಾಖಲೆ ಸಮೇತ ಸಾಬೀತು ಮಾಡಲು ಸಾಧ್ಯವಾಗಿಲ್ಲ. ಯಂಗ್ ಇಂಡಿಯಾ ಹಾಗೂ ನ್ಯಾಷನಲ್ ಹೆರಾಲ್ಡ್ ಸಂಸ್ಥೆಯೊಂದಿಗೆ ನಡೆದಿರುವ ಪ್ರಕ್ರಿಯೆಗಳಿಗೆ ಪ್ರತಿಯೊಂದಕ್ಕೂ ದಾಖಲೆಗಳಿರುವುದು ಇ.ಡಿ ಇಲಾಖೆಯ ತನಿ ಖೆಯಿಂದಲೇ ಬಹಿರಂಗವಾಗಿರುವ ಸತ್ಯ ಎಂ ದು ಹೇಳಿದ್ದಾರೆ. ಸ್ವಾತಂತ್ರ್ಯ ಹೋರಾಟಕ್ಕೆ ತ್ಯಾಗ ಬಲಿದಾನ ಮಾಡಿರುವ ಕುಟುಂಬವನ್ನು ತೇಜೋವಧೆ ಮಾಡುವ ದುರದ್ದೇಶದಿಂದಲೇ ನ್ಯಾಷನಲ್ ಹೆರಾಲ್ಡ್ ಪ್ರಕರಣವನ್ನು ಗಾಂಧಿ ಕುಟುಂಬದ ವಿರುದ್ಧ ಬಳಸಿಕೊಳ್ಳುತ್ತಿರುವುದು ದೇಶದ ಜನರಿಗೆ ಅರಿವಾಗಿದೆ ಎಂದು ತಿಳಿಸಿದ್ದಾರೆ.

ನೆಹರೂ ಅವರ ನಾಯಕತ್ವದಲ್ಲಿ 5000 ಸ್ವತಂತ್ರ ಹೋರಾಟಗಾರರು ಸೇರಿ ಪ್ರಾರಂಭಿಸಿದ ಭವ್ಯ ಇತಿಹಾಸ ಹೊಂದಿರುವ ಸಂಸ್ಥೆ ನ್ಯಾಷನಲ್ ಹೆರಾಲ್ಡ್. ಸ್ವಾತಂತ್ರ್ಯ ಹೋರಾಟದ ಭಾಗವಾಗಿದ್ದ 1937 ರಲ್ಲಿ ಪ್ರಾರಂಭವಾದ ಪತ್ರಿಕಾ ಸಂಸ್ಥೆಯನ್ನು ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸದೇ, ಬ್ರಿಟಿಷರ ಗುಲಾಮರಾಗಿದ್ದ ಬಿಜೆಪಿ ಪಕ್ಷ ಸುಳ್ಳು ಮೊಕದ್ದಮೆಗಳನ್ನು ಹೂಡಿರುವುದು ಅಸಹ್ಯ ರಾಜಕೀಯದ ಪರಮಾವಧಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದೇಶದ ಜನ ಗಾಂಧಿ ಕುಟುಂಬದ ಜೊತೆಗೆ ನಿಂತಿದೆ, ಸಂವಿಧಾನ, ನ್ಯಾಯಾಂಗದ ಮೇಲಿನ ನಂಬಿಕೆ ಕಳೆದುಕೊಂಡಿಲ್ಲ. ಸತ್ಯ ಹೊರಬರುವಾಗ ಬಿಜೆಪಿ ಮತ್ತು ಅದರ ಅಂಗ ಸಂಸ್ಥೆಗಳಂತೆ ವರ್ತಿಸುತ್ತಿರುವ ಇ.ಡಿ, ಐಟಿಗಳಂತಹ ಸಂಸ್ಥೆಗಳಿಗೆ ಕಪಾಳಮೋಕ್ಷವಾಗುವ ಕಾಲ ದೂರವಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# ರಾಜ್ಯ ರಾಜಕಾರಣಕ್ಕೆ ಬರ್ತಾರಾ ಮಲ್ಲಿಕಾರ್ಜುನ ಖರ್ಗೆ..?

**ಬೆಂಗಳೂರು,ಜು.5–** ಸೆಪ್ಟೆಂಬರ್ ಕ್ರಾಂತಿಯ ಚರ್ಚೆಯಲ್ಲಿ ಅಬ್ಬರಿಸಿ ಹಾರಾಟ ನಡೆಸಿದವರೆಲ್ಲಾ ತಣ್ಣಗಾದ ಬೆನ್ನಲ್ಲೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರನ್ನು ರಾಜ್ಯ ರಾಜಕಾರಣಕ್ಕೆ ಕರೆತಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಟಾಂಗ್ ನೀಡಲು ಒಂದು ಬಣ ಸದ್ದಿಲ್ಲದೆ ಕಾರ್ಯಾಚರಣೆ ನಡೆಸುತ್ತಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ರಾಷ್ಟ್ರ ರಾಜಕಾರಣದಲ್ಲಿ ಪ್ರಭಾವಿ ಸ್ಥಾನದಲ್ಲಿದ್ದು, ಅವರನ್ನು ಕರೆತರುವ ಮೂಲಕ ಕರ್ನಾಟಕದಲ್ಲಿ ಸಿದ್ದರಾಮಯ್ಯ ಅವರ ಅಹಿಂದ ಮೂಲಮಂತ್ರಕ್ಕೆ ಪೆಟ್ಟು ನೀಡುವ ಕಾಯ ್ತಂತ್ರಗಳು ನಡೆಯುತ್ತಿವೆ. ವಿಧಾನಸಭೆ ಚುನಾವಣೆಯ ಫಲಿತಾಂಶದ ಬಳಿಕ ಮುಖ್ಯಮಂತ್ರಿ ಆಯ್ಕೆಯ ವಿಚಾ ರವಾಗಿ ಚರ್ಚೆ ನಡೆದಾಗ ಡಿ.ಕೆ.ಶಿವಕುಮಾರ್, ಮಲ್ಲಿ ಕಾರ್ಜುನ ಖರ್ಗೆಯವರು ಮುಖ್ಯಮಂತ್ರಿಯಾಗುವ ದಾದರೆ ತಾವು ರೇಸ್‌ನಿಂದ ಹಿಂದೆ ಸರಿಯುವುದಾಗಿ ಬಹಿರಂಗವಾಗಿಯೇ ಘೋಷಿಸಿದ್ದರು.

ಆಗ ಹುದ್ದೆಯ ಪ್ರಬಲ ಆಕಾಂಕ್ಷಿಯಾಗಿದ್ದ ಸಿದ್ದರಾಮಯ್ಯ ಅವರಿಗೆ ನುಂಗಲಾರದ ಬಿಸಿತುಪ್ಪವಾಗಿತ್ತು. ಹೇಳಲೂ ಆಗದೆ, ಅನುಭವಿಸಲೂ ಆಗದೇ ಮೌನಕ್ಕೆ ಶರಣಾಗಿದ್ದರು. ಡಿ.ಕೆ.ಶಿವಕುಮಾರ್, ಖರ್ಗೆಯವರ ದಾಳ ಉರುಳಿಸಿ ರಾಜಕೀಯ ಎದುರಾಳಿಗಳಿಗೆ ಭರ್ಜರಿ ಪ್ರತಿಕ್ರಿಯೆ ನೀಡಿದ್ದರು. ಆದರೆ ರಣತಂತ್ರದಲ್ಲಿ ಯಾರಿಗಿಂತಲೂ ಏನೂ ಕಡಿಮೆ ಇಲ್ಲದ ಸಿದ್ದರಾಮಯ್ಯ ಮೌನವಾಗಿದ್ದುಕೊಂಡೇ ತಮ್ಮ ಗುರಿ ಸಾಧಿಸಿದರು. ಈಗ ಎಲ್ಲವೂ ಸುಶಾಂತವಾಗಿ ನಡೆಯುತ್ತಿರುವಾಗ ತಿಳಿಗೊಳಕ್ಕೆ ಕಲ್ಲೆಸೆದಂತೆ ರಾಜಣ್ಣನೀಡಿದ ಸೆಪ್ಟೆಂಬರ್ ಕ್ರಾಂತಿ ಭಾರೀ ಸಂಚಲನ ಮೂಡಿಸಿತ್ತು. ಒಂದಷ್ಟು ಮಂದಿ ಡಿ.ಕೆ.ಶಿವಕುಮಾರ್ ಪರವಾಗಿ ಬ್ಯಾಟಿಂಗ್ ಆರಂಭಿಸಿದರು. ಹೇಳಿದ್ದನ್ನು ಹೇಳಿ ಮುಗಿಸಿದ ರಾಜಣ್ಣನಂತರ ಏನೂ ಆಗಿಯೇ ಇಲ್ಲ ಎಂಬಂತೆ ಉಲ್ಟಾಸೀದಾ ಮಾತ ನಾಡಿ ತಿಪ್ಪೆ ಸಾರಿಸುವ ಪ್ರಯತ್ನ ಮಾಡಿದ್ದಾರೆ. ಅದಕ್ಕೆ ಡಿ.ಕೆ.ಶಿವಕುಮಾರ್ ಅವರ ಬಣ ಕೊಟ್ಟ ಎದುರೇಟು ಭಾರೀ ಖಾರವಾಗಿತ್ತು. ಅನಿವಾರ್ಯವಾಗಿ ಡಿ.ಕೆ.ಶಿವಕು ಮಾರ್‌ರವರೇ ಮಧ್ಯ ಪ್ರವೇಶಿಸಿಗದರುವ ಮೂಲಕ ಎಲ್ಲರನ್ನೂ ತಣ್ಣಗಾಗಿಸಿದ್ದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವಕಾಶ ಸಿಕ್ಕಾಗಲೆಲ್ಲಾ ಡಿ.ಕೆ.ಶಿವಕುಮಾರ್‌ರವರನ್ನು ಹೊರಗಿಟ್ಟೆ ಕೆಲಸ ಮಾಡುವ ಪ್ರಯತ್ನ ಮಾಡುತ್ತಾರೆ ಎಂಬ ಅಪವಾದಗಳಿವೆ. ಡಿ.ಕೆ.ಶಿವಕುಮಾರ್ ವಿದೇಶಿ ಪ್ರವಾಸದಲ್ಲಿದ್ದಾಗ ಬೆಂಗಳೂರಿನಲ್ಲಿ ನಗರ ಪ್ರದಕ್ಷಿಣೆ ಮಾಡುವ ಮೂಲಕ ಸಿದ್ದರಾಮಯ್ಯ ಅವರು ಡಿ.ಕೆ.ಶಿವಕುಮಾರ್ ಅವರ ಕಾರ್ಯವ್ಯಾಪ್ತಿಯಲ್ಲಿ ಹಸ್ತಕ್ಷೇಪ ಮಾಡಿದ್ದರು. ಇತ್ತೀಚೆಗೆ ನಂದಿಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಸಮೂಹ ಭಾವಚಿತ್ರ ತೆಗೆಸುವಾಗ ಡಿ.ಕೆ.ಶಿವಕುಮಾರ್ ಅವರನ್ನು ಹೊರಗಿಟ್ಟಿದ್ದೂ ಕೂಡ ಭಾರೀ ಚರ್ಚೆಗೆ ಗ್ರಾಸವಾಗಿತ್ತು. ಇಂತಹ ಹಲವಾರು ಕಹಿಘಟನೆಗಳನ್ನು ನುಂಗಿಕೊಂಡು ಡಿ.ಕೆ.ಶಿವಕುಮಾರ್ ಏನೂ ಆಗಿಯೇ ಇಲ್ಲ ಎಂಬಂತೆ ತಾಳ್ಮೆಯಿಂದ ಇರುವುದು ಕಂಡುಬರುತ್ತಿದೆ.

ಒಳಗೊಳಗೆ ಮಲ್ಲಿಕಾರ್ಜುನ ಖರ್ಗೆಯವರನ್ನು ರಾಜ್ಯ ರಾಜಕಾರಣಕ್ಕೆ ತರುವ ಮೂಲಕ ಡಿಸೆಂಬರ್ ನಂತರದ ಅವಧಿಗೆ ಮುಖ್ಯಮಂತ್ರಿ ಮಾಡುವ ಪ್ರಯತ್ನಗಳು ನಡೆಯುತ್ತಿವೆ. ಕೆಲವು ಸಚಿವರು, ಪ್ರಭಾವಿ ನಾಯಕರು ಖರ್ಗೆಯವರ ಬಳಿ ಸಲುಗೆ ಮತ್ತು ಆತ್ಮೀಯತೆಯಿಂದಿರುವ ಪ್ರಮುಖರು ರಾಜ್ಯರಾಜಕಾರಣಕ್ಕೆ ಬರುವಂತೆ ಮನವೊಲಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ತಿಳಿದುಬಂದಿದೆ.

2013 ರಿಂದಲೂ ರಾಜ್ಯ ರಾಜಕಾರಣದ ಬಗ್ಗೆ ಆಸಕ್ತಿ ಕಳೆದುಕೊಂಡಿರುವ ಖರ್ಗೆಯವರನ್ನು ಹೇಗಾದರೂ ಮಾಡಿ ಮನವೊಲಿಸಿದರೆ ಸಿದ್ದರಾಮಯ್ಯನವರ ಬಣದ ಧ್ವನಿ ಅಡಗಲಿದೆ. ಯಾರೂ ಚಕಾರವೆತ್ತದೆ ಹೈಕಮಾಂಡ್ ನಿರ್ಧಾರವನ್ನು ಒಪ್ಪಿಕೊಳ್ಳಬೇಕಾಗುತ್ತದೆ ಎಂಬ ಲೆಕ್ಕಾಚಾರದಲ್ಲಿ ಒಂದು ಬಣ ಕಾರ್ಯಾಚರಣೆಗಿಳಿದಿದೆ. ಇದಕ್ಕೆ ಪೂರಕವಾಗಿ ಶಾಸಕರ ಅಭಿಪ್ರಾಯ ಸಂಗ್ರಹದಂತಹ ಪ್ರಹಸನಗಳು ನಡೆಯುತ್ತಿವೆ ಎಂದು ಹೇಳಲಾಗುತ್ತಿದೆ.

ಡಿ.ಕೆ.ಶಿವಕುಮಾರ್ ಅವರು ಮಲ್ಲಿಕಾರ್ಜುನ ಖರ್ಗೆಯವರನ್ನು ಒಪ್ಪುವ ಸಾಧ್ಯತೆ ಇಲ್ಲ ಎಂಬ ಅಭಿ ಟ ಪ್ರಾಯಗಳ ನಡುವೆಯೂ ಸದ್ದಿಲ್ಲದೆ ಈ ರೀತಿಯ ಕಾರ್ಯಾಚರಣೆ ನಡೆಯುತ್ತಿರುವುದು ಕುತೂಹಲ ಕೆರಳಿಸಿದೆ.

# ಭಯೋತ್ಪಾದನೆಗೆ ಯಾವ ದೇಶವೂ ಆಶ್ರಯ ನೀಡಬಾರದು: ಮೋದಿ

**ಪೋರ್ಟ್ ಆಫ್ ಸ್ಪೈನ್, ಜು.5–** 'ಭಯೋತ್ಪಾದನೆ ಮಾನವೀಯತೆಯ ಶತ್ರು, ಜಗತ್ತಿನ ಯಾವುದೇ ದೇಶ ಆಶ್ರಯ ಅಥವಾ ಸ್ಥಳ ನೀಡಬಾರದು, ಆಗ ಮಾತ್ರ ಅದನ್ನು ಹೋಗಲಾಡಿಸಲು ಸಾಧ್ಯ, ಈ ನಿಟ್ಟಿನಲ್ಲಿ ಎಲ್ಲರೂ ಒಗ್ಗೂಡಿ ಹೋರಾಟ ಮಾಡಬೇಕಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಭಾರತದ ಜೊತೆ ನಿಂತಿದ್ದಕ್ಕಾಗಿ ಕೆರಿಬಿಯನ್ ರಾಷ್ಟ್ರದ ಜನರು ಮತ್ತು ಸರ್ಕಾರಕ್ಕೆ ಧನ್ಯವಾದ ಸಲ್ಲಿಸಿದ ಅವರು, ನಮ್ಮ ಮುಂದೆ ಹೊಸ ಸವಾಲುಗಳಿವೆ ಹೀಗಾಗಿಯೇ ಶಾಂತಿ ಮತ್ತು ಪ್ರಗತಿ ಕಾಣಲು ಹಲವು ದೇಶಗಳು ಹೆಣಗಾಡುತ್ತಿವೆ ಎಂದು ತಿಳಿಸಿದ್ಧಾರೆ

ಟ್ರಿನಿಡಾಡ್ ಮತ್ತು ಟೊಬಾಗೋ ಸಂಸತ್ತಿನ ಜಂಟಿ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಈ ಕೆಂಪು ಸದನವೇ ಭಯೋತ್ಪಾದನೆಯ ಗಾಯಗಳು ಮತ್ತು ಮುಗ್ಧ ರಕ್ತದ ನಷ್ಟಕ್ಕೆ ಸಾಕ್ಷಿಯಾಗಿದೆ, "ಭಯೋತ್ಪಾದನೆಗೆ ಯಾವುದೇ ಆಶ್ರಯ ಅಥವಾ ಸ್ಥಳ ನೀಡುವುದನ್ನು ಎಲ್ಲರೂ ಒಗ್ಗೂಡಿ ಹೋರಾಟ ಮಾಡಬೇಕು ಎಂದು ಮಾಹಿತಿ ಹಂಚಿಕೊಂಡಿದ್ದಾರೆ



"ಭಯೋತ್ಪಾದನೆ ಮಾನವೀಯತೆಯ ಶತ್ರು. ಈ ಕೆಂಪು ಸದನವೇ ಭಯೋತ್ಪಾದನೆಯ ಗಾಯಗಳಿಗೆ ಮತ್ತು ಮುಗ್ಧ ರಕ್ತದ ನಷ್ಟಕ್ಕೆ ಸಾಕ್ಷಿಯಾಗಿದೆ. ಭಯೋತ್ಪಾದನೆಗೆ ಯಾವುದೇ ಆಶ್ರಯ ಅಥವಾ ಸ್ಥಳಾವಕಾಶ ನಿರಾಕರಿಸಲು ನಾವು ಒಗ್ಗಟ್ಟಿನಿಂದ ನಿಲ್ಲಬೇಕು" ಎಂದು ಅವರು ಹೇಳಿದರು.

ಜಾಗತಿಕ ದಕ್ಷಿಣದ ರಾಷ್ಟ್ರಗಳಲ್ಲಿ ಹೆಚ್ಚಾಗಿ ಕಂಡುಬರುತ್ತಿರುವ ಭಯೋತ್ಪಾದನೆ ವಿರುದ್ಧ ಹೋರಾಟ ಮಾಡಬೇಕಾಗಿದೆ. ಹೊಸ ಮತ್ತು ನ್ಯಾಯಯುತ ಕ್ರಮ ಕೈಗೊಳ್ಳುವ ಅಗತ್ಯ ಮತ್ತು ಅನಿವಾರ್ಯತೆ ಇದೆ ಎಂದು ತಿಳಿಸಿದ್ಧಾರೆ

'ಭಾರತದ ಜನರಿಂದ ಟ್ರಿನಿಡಾಡ್ ಮತ್ತು ಟೊಬಾಗೋ ಜನರಿಗೆ' ಎಂಬ ಸ್ಪೀಕರ್ ಕುರ್ಚಿಯ ಸುವರ್ಣ ಪದಗಳನ್ನು ನೋಡಿದಾಗ, ಕುರ್ಚಿ ಕೇವಲ ಪೀಠೋಪಕರಣಗಳ ತುಣುಕಲ್ಲ, ಆದರೆ ಎರಡು ರಾಷ್ಟ್ರಗಳ ನಡುವಿನ ಸ್ನೇಹದ ಪ್ರಬಲ ಸಂಕೇತವಾಗಿದೆ ಎಂದು ತಿಳಿಸಿದ್ದಾರೆ ಟ್ರಿನಿಡಾಡ್ ಮತ್ತು ಟೊಬಾಗೊ ಸಂಸ ತ್ತಿನಲ್ಲಿ ಸ್ಪೀಕರ್ ಕುರ್ಚಿಯನ್ನು ಭಾರತ 1968ರಲ್ಲಿ ಉಡುಗೊರೆಯಾಗಿ ನೀಡಿತು. ಅಲಂಕೃತ ಕುರ್ಚಿಯ ಮೇಲೆ ಭಾರತದ ಜನರಿಂದ ಟ್ರಿನಿಡಾಡ್ ಮತ್ತು ಟೊಬಾಗೊ ಜನರಿಗೆ ಎಂಬ ಅಡಿ ಬರಹ ಬರೆದಿದ್ದು ಎರಡು ರಾಷ್ಟಗಳ ನಡುವಿನ ಬಾಂಧವ್ಯದ ಸಂಕೇತವಾಗಿದೆ ಎಂದಿದ್ಧಾರೆ

ದೇಶದ ಅತ್ಯುನ್ನತ ರಾಷ್ಟ್ರೀಯ ಗೌರವವಾದ 'ದಿ ಆರ್ಡರ್ ಆಫ್ ದಿ ರಿಪಬ್ಲಿಕ್ ಆಫ್ ಟ್ರಿನಿಡಾಡ್ ಮತ್ತು ಟೊಬಾಗೊ ಪ್ರಶಸ್ತಿಯನ್ನು ಪಡೆದ ನಂತರ, ಪ್ರಧಾನಿ ನರೇಂದ್ರ ಮೋದಿ ಅವರು ಈ ಪ್ರಶಸ್ತಿಯನ್ನು ಭಾರತ ಮತ್ತು ಟ್ರಿನಿಡಾಡ್ ಮತ್ತು ಟೊಬಾಗೊ ನಡುವಿನ ಶಾಶ್ವತ ಮತ್ತು ಆಳವಾದ ಸ್ನೇಹದ ಪ್ರತಿಬಿಂಬ ಎಂದಿದ್ಧಾರೆ. ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಅವರು 140 ಕೋಟಿ ಭಾರತೀಯರ ಪರವಾಗಿ ಈ ಗೌರವವನ್ನು ಸ್ವೀಕರಿಸಿದ್ದು ಉಭಯ ದೇಶಗಳ ನಡುವೆ ಬಾಂಧವ್ಯ ಬಲವರ್ಧನೆಗೆ ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

# ಮಾಧ್ಯಮ ಆಲೋಚನೆಗಳನ್ನು ಪ್ರಚೋದಿಸಬೇಕು: ನ್ಯಾ.ಅರವಿಂದ್ ಕುಮಾರ್

**ಬೆಂಗಳೂರು,ಜು.5:–** ಮಾಧ್ಯಮ ಸಂವಿಧಾನದ ನಾಲ್ಕನೇ ಅಂಗವಾಗಿದ್ದು, ಇದು ಅಧಿಕಾರವನ್ನು ರಕ್ಷಿಸುವುದಲ್ಲ, ಬದಲಿಗೆ ಆಲೋಚನೆಗಳನ್ನು ಪ್ರಚೋದಿಸಬೇಕು. ಆದರೆ ಪ್ರಚೋದನಕಾರಿಯಾಗಬಾರದು. ಸ್ವಾತಂತ್ರ್ಯವನ್ನು ಉತ್ತೇಜಿಸುವ ಜೊತೆಗೆ ನಿಷ್ಠುರವಾಗಿರಬೇಕು ಮತ್ತು ಸಮತೋಲನ ಕಾಯ್ದುಕೊಳ್ಳಬೇಕು ಎಂದು ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಅರವಿಂದ್ ಕುಮಾರ್ ಹೇಳಿದ್ದಾರೆ.

ನಗರದ ಭಾರತೀಯ ವಿದ್ಯಾಭವನದಲ್ಲಿ ವಕೀಲರ ವಾಹಿನಿ ಮೂಲಕ ಆಯೋಜಿಸಿದ್ದ ಮಾಧ್ಯಮಗಳ ಸ್ವಾತಂತ್ರ್ಯ ಮತ್ತು ನಿರ್ಬಂಧ, ಸಮತೋಲನ ಕಾಯ್ದೆ ಕುರಿತು ಜಸ್ಟೀಸ್ ಕೆ.ಆರ್. ಗೋಪಿ ವಲ್ಲಭ ಅಯ್ಯಂಗಾರ್ ಸ್ಮಾರಕ ಉಪನ್ಯಾಸ ನೀಡಿದ ಅವರು, ಮಾಧ್ಯಮ ಸತ್ಯವನ್ನು ಎತ್ತಿ ಹಿಡಿಯಬೇಕು. ಮಾಧ್ಯಮದ ನಾಲಿಗೆಗೆ ಸ್ವಾತಂತ್ರ್ಯವಿರಬಹುದು. ಆದರೆ ವಿವೇಚನೆ ಹೊಂದಿರಬೇಕು. ಸಂಪಾದಕರು, ನಿರೂಪಕರು, ಡಿಜಿಟಲ್ ಪ್ರಭಾವಿಗಳು ಮಾಧ್ಯಮವನ್ನು ಪ್ರಚೋದನೆಗಾಗಿ ಬಳಸಿಕೊಳ್ಳಬಾರದು. ನೈತಿಕ ಸ್ಫೂರ್ತಿಯ ಮೂಲಕ ಸ್ವಧರ್ಮವನ್ನು ಕಾಪಾಡಬೇಕು. ಪತ್ರಿಕೋದ್ಯಮದಲ್ಲಿ ಆಂತರಿಕ ಧರ್ಮವನ್ನು ಪರಿಪಾಲಿಸಬೇಕು. ಪತ್ರಿಕೋದ್ಯಮ ಎಂದರೆ ಸತ್ಯ ಪರಿಶೋಧನೆಯಾಗಿದ್ದು, ಯಾರಿಗೂ ಹಾನಿ ಮಾಡಬಾರದು. ಸಾರ್ವಜನಿಕ ಹಿತಾಸಕ್ತಿ ಜೊತೆಗೆ ಜವಾಬ್ದಾರಿತನದಿಂದ ಮುನ್ನಡೆಯಬೇಕು ಎಂದು ಹೇಳಿದರು.

ಮಾಧ್ಯಮಗಳು ತನಿಖಾ ಪತ್ರಿಕೋದ್ಯಮಕ್ಕೆ ಉತ್ತೇಜನ ನೀಡಬೇಕು. ಹಾಗೆಂದು ತೀರ್ಪು ನೀಡಲು ಹೋಗಬಾರದು. ಮಾಧ್ಯಮ ಸ್ವಾತಂತ್ರ್ಯ ಪ್ರಕಟಣೆಗಷ್ಟೇ ಸೀಮಿತವಲ್ಲ, ಬದಲಿಗೆ ವ್ಯವಸ್ಥೆಗೆ ಒಂದು ಸ್ಪಷ್ಟ ಸ್ವರೂಪ ನೀಡಬೇಕು. ಪತ್ರಿಕೋದ್ಯಮ ಮುಕ್ತವಾಗಿ ಅಷ್ಟೇ ಅಲ್ಲದೇ ಸರಿಯಾಗಿ ಮಾತನಾಡಬೇಕು. ಮಾಧ್ಯಮ ಎಂಬುದು ಋಷಿಯಂತೆ. ಸತ್ಯಕ್ಕಾಗಿ ನಿರಂತರವಾಗಿ ಪ್ರಶ್ನೆ ಮಾಡಬೇಕು. ವ್ಯಕ್ತಿಗಳ ವೈಯಕ್ತಿಕ ಸ್ವಾತಂತ್ರ್ಯಕ್ಕೆ ಧಕ್ಕೆಯಾಗಬಾರದು. ಮಾಧ್ಯಮ ಸ್ವಾತಂತ್ರ್ಯ ಎಂದರೆ ಅದು ಸಾಂವಿಧಾನದ ನೈತಿಕತೆಯಾಗಿದ್ದು, ಅದು ಕಾನೂನಿನ ಹಕ್ಕು ಅಲ್ಲ. ಅದು ನೈತಿಕತೆಯನ್ನು ಕಾಪಾಡಿಕೊಂಡು ಹೋಗುವಂತಿರಬೇಕು. ಸ್ವಯಂ ನಿಯಂತ್ರಣಕ್ಕೆ ಒಳಪಡಬೇಕು. ಪತ್ರಕರ್ತರು ಮತ್ತು ವೈದ್ಯರು ಸಾಮಾಜಿಕ ವೈದ್ಯರು ಎಂದು ವಿಶ್ಲೇಷಿಸಿದರು.

ಜಸ್ಟೀಸ್ ಕೆ.ಆರ್, ಗೋಪಿ ವಲ್ಲಭ ತುಮಕೂರಿನವರು, ಆಗಿನ ಮೈಸೂರು ಹೈಕೋರ್ಟ್ ನ ಮುಖ್ಯ ನ್ಯಾಯಮೂರ್ತಿಯಾಗಿದ್ದ ನಿಟ್ಟೂರು ಶ್ರೀನಿವಾಸ ರಾವ್ ಅವರಲ್ಲಿ ಕಿರಿಯ ವಕೀಲರಾಗಿ ಕೆಲಸ ಮಾಡಿದ್ದರು. ಒಮ್ಮೆ ನಿಟ್ಟೂರು ಶ್ರೀನಿವಾಸ್ ಅವರಲ್ಲಿ ನಾನು ಕೇಳಿದ್ದೆ ನಿಮ್ಮ ಕಿರಿಯ ವಕೀಲರು ಯಾರು ಉತ್ತಮರು ಎಂದು ಪ್ರಶ್ನಿಸಿದಾಗ ಜಸ್ಟೀಸ್ ಕೆ.ಆರ್, ಗೋಪಿ ವಲ್ಲಭ ಅಯ್ಯಂಗಾರ್ ಎಂದು ಹೇಳಿದ್ದರು. ಹೇಗೆ ಪ್ರಕರಣಗಳಲ್ಲಿ ಹೇಗೆ ವಾದಿಸಬೇಕು. ವಕೀಲರ ನೀತಿ, ಸಿದ್ಧಾಂತಗಳು, ಶಿಸ್ತು ಹೇಗಿರಬೇಕು. ಹೀಗೆ ಹಲವು ವಿಷಯಗಳ ಬಗ್ಗೆ ಇತರೆ ವಕೀಲರಿಗೆ ಅವರು ಮಾದರಿಯಾಗಿದ್ದರು ಎಂದರು.




ನನ್ನ ತಂದೆ ಎಚ್.ಕೆ. ಕುಮಾರ ಸ್ವಾಮಿ ಮೂಲತಃ ಸಹಕಾರಿ ಧುರೀಣರು. ಜೊತೆಗೆ ಪತ್ರಕರ್ತರು. ಸ್ವಾತಂತ್ರ್ಯ ಹೋರಾಟ ಸಂದರ್ಭದಲ್ಲಿ ನಾಲ್ಕು ವರ್ಷ ಮೈಸೂರು ಜೈಲಿನಲ್ಲಿದ್ದರು. ಆಗ ಮೂರನೇ ವರ್ಷ ಅವರಿಗೆ ಸ್ವಲ್ಪ ಸ್ವಾತಂತ್ರ್ಯ ದೊರೆತಿತ್ತು. ಮನೆಯಿಂದ ಒಂದು ಹೊತ್ತಿನ ಊಟ ತರಿಸಿಕೊಳ್ಳಲು ಅವಕಾಶ ನೀಡಲಾಗಿತ್ತು. ಮನೆಯಿಂದ ಪ್ರತಿದಿನ ಟಿಫಿನ್ ಬಾಕ್ಸ್ ಬರುತ್ತಿದ್ದು. ಆಗ ಈ ಅವಕಾಶವನ್ನು ಬಳಸಿಕೊಂಡು ಸಾಧ್ವಿ ಪತ್ರಿಕೆಗೆ ನಮ್ಮ ತಂದೆ ಪ್ರತಿದಿನ ಲೇಖನ ತಲುಪಿಸುತ್ತಿದ್ದರು. ಇದು ತಿಳಿದ ನಂತರ ಅವರನ್ನು ಮೈಸೂರಿನಿಂದ ಹಾಸನ ಜೈಲಿಗೆ ವರ್ಗಾಯಿಸಿದ್ದರು. ಹಾಸನದಲ್ಲಿ ಅವರಿಗೆ ಹಾರ್ನಳ್ಳಿ ರಾಮಸ್ವಾಮಿ ಜೊತೆಯಾದರು. ತನ್ನ ಕೊನೆಯ ಹಂತದವರೆಗೆ ನನ್ನ ತಂದೆ ಪತ್ರಕರ್ತ ಎನ್ನುವ ಹಣೆಪಟ್ಟಿಯನ್ನು ಅಂಟಿಕೊಂಡಿಸಿದ್ದರು ಎಂದು ನ್ಯಾಯಮೂರ್ತಿ ಅರವಿಂದ ಕುಮಾರ್ ಹೇಳಿದರು.

ಜಸ್ಟೀಸ್ ಕೆ.ಆರ್. ಗೋಪಿ ವಲ್ಲಭ ಅಯ್ಯಂಗಾರ್ ಅವರ ಮೊಮ್ಮಗಳು ಮತ್ತು ನಿಮ್ಹಾನ್ಸ್ ನಿರ್ದೇಶಕರಾದ ಡಾ. ಪ್ರತಿಮಾಮೂರ್ತಿ ಮಾತನಾಡಿ, ಜಸ್ಟೀಸ್ ಕೆ.ಆರ್. ಗೋಪಿ ವಲ್ಲಭ ಅಯ್ಯಂಗಾರ್ ಅವರು ನ್ಯಾಯಾಂಗ ಕ್ಷೇತ್ರದಲ್ಲಿ ಭವ್ಯ ಪರಂಪರೆಯನ್ನು ಹಾಕಿಕೊಟ್ಟಿದ್ದಾರೆ. ಅವರು ಮೌನವನ್ನು ಅತ್ಯಂತ ಪರಿಣಾಮಕಾರಿಯಾಗಿ ಬಳಸುತ್ತಿದ್ದರು. ತಪ್ಪು ಮಾಡಿದ್ದರೆ ಅದನ್ನು ಅರ್ಥಮಾಡಿಕೊಂಡು ನಾವೇ ತಿದ್ದುಕೊಳ್ಳುವಂತೆ ಪ್ರೇರೇಪಿಸುತ್ತಿದ್ದರು. ಹಲವಾರು ಹಿರಿಯ ವಕೀಲರು, ನ್ಯಾಯಾಂಗದ ಗಣ್ಯರ ಜೊತೆ ಸಂವಾದ ನಡೆಸಲು ತಮಗೆ ಸಾಧ್ಯವಾಯಿತು ಎಂದರು.

ಮಾಜಿ ಅಡ್ವೋಕೆಟ್ ಜನರಲ್ ಹಾಗೂ ಹಿರಿಯ ವಕೀಲ ಉದಯ್ ಹೊಳ್ಳ ಮಾತನಾಡಿ, ಪ್ರಜಾಪ್ರಭುತ್ವವನ್ನು ರಕ್ಷಿಸಲು ಮಾಧ್ಯಮದ ಪಾತ್ರ ಅನನ್ಯ. ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ಮಾಧ್ಯಮಗಳು ಪ್ರಜಾತಂತ್ರ ರಕ್ಷಣೆಗಾಗಿ ಮಾಡಿದ ಹೋರಾಟ ಮರೆಯಲು ಸಾಧ್ಯವೇ ಇಲ್ಲ ಎಂದರು.

ವಕೀಲರ ವಾಹಿನಿ ಸಂಪಾದಕರು ಮತ್ತು ಪ್ರಕಾಶಕರಾದ ಡಾ.ಡಿ.ಎಂ. ಹೆಗ್ಡೆ ಮಾತನಾಡಿ, ಜಸ್ಟೀಸ್ ಕೆ.ಆರ್. ಗೋಪಿ ವಲ್ಲಭ ಅಯ್ಯಂಗಾರ್ ನ್ಯಾಯಾಂಗ ಕ್ಷೇತ್ರದಲ್ಲಿ ಅಚ್ಚಳಿಯದ ಛಾಪು ಮೂಡಿಸಿದ್ದಾರೆ. ಅವರು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನಡೆಯುವ ಜೊತೆಗೆ ಅವರ ತತ್ವ ಸಿದ್ಧಾಂತಗಳನ್ನು ವಕೀಲ ಸಮುದಾಯ ಅನುಸರಿಸುವಂತಾಗಬೇಕು ಎಂದು ಹೇಳಿದರು. ವಕೀಲರ ವಾಹಿನಿ ಸ್ಥಾಪಕರಾದ ಅರವಿಂದ್ ನೆಗಲೂರು, ಮುಖ್ಯ ಸಂಪಾದಕ ಎಸ್.ಎನ್. ಪ್ರಶಾಂತ್ ಚಂದ್ರ, ಮತ್ತಿತರರು ಉಪಸ್ಥಿತರಿದ್ದರು.

# ಶುಭಮನ್ ಅದ್ಭುತ ಸಾಧನೆ




**ಬರ್ಮಿಂಗ್‌ಹ್ಯಾಮ್,ಜು..5–**ಇಂಗ್ಲೆಂಡ್ ವಿರುದ್ಧದ ಎಡ್ಜ್‌ಬಾಸ್ಟನ್ ಟೆಸ್ಟ್ ಪಂದ್ಯದಲ್ಲಿ, ಭಾರತೀಯ ನಾಯಕ ಶುಭಮನ್ ಗಿಲ್ ಬ್ಯಾಟಿಂಗ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ್ದಾರೆ. ಶುಭಮನ್ ಗಿಲ್ ಭಾರತೀಯ ನಾಯಕನಾಗಿ ಟೆಸ್ಟ್‌ನಲ್ಲಿ ದ್ವಿಶತಕ ಗಳಿಸಿದ ಎರಡನೇ ಕಿರಿಯ ನಾಯಕ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.ಇದು ಶುಭಮನ್ ಗಿಲ್ ಅವರ ಟೆಸ್ಟ್ ವೃತ್ತಿಜೀವನದ ಮೊದಲ ದ್ವಿಶತಕವಾಗಿದೆ.

ಶುಭಮನ್ 387 ಎಸೆತಗಳಲ್ಲಿ 269 ರನ್ ಗಳಿಸಿದರು. ಈ ಸಮಯದಲ್ಲಿ, 30 ಬೌಂಡರಿಗಳ ಜೊತೆಗೆ, 3 ಸಿಕ್ಸರ್‌ಗಳು ಅವರ ಬ್ಯಾಟ್‌ನಿಂದ ಹೊರಬಂದವು.ದ್ವಿಶತಕದೊಂದಿಗೆ ಇತಿಹಾಸ ಸೃಷ್ಟಿಸಿ, ದಾಖಲೆ ಪುಸ್ತಕವನ್ನೇ ಅಲ್ಲಾಡಿಸಿದ್ದಾರೆ. ಅವರಿಗಿಂತ ಮೊದಲು, ಈ ಸಾಧನೆಯನ್ನು ಮನ್ಸೂರ್ ಅಲಿ ಖಾನ್ ಪಟೌಡಿ ಸಾಧಿಸಿದ್ದರು,ಆಗ ಅವರು 23 ವರ್ಷ ವಯಸ್ಸಿನವರಾಗಿದ್ದರು ಮತ್ತು ದೆಹಲಿಯಲ್ಲಿ ಇಂಗ್ಲೆಂಡ್ ವಿರುದ್ಧ ದ್ವಿಶತಕ ಗಳಿಸಿದರು. ಸಚಿನ್ ತೆಂಡೂಲ್ಕರ್ ಮತ್ತು ವಿರಾಟ್ ಕೊಹ್ಲಿ ಕ್ರಮವಾಗಿ 26 ಮತ್ತು 27 ನೇ ವಯಸ್ಸಿನಲ್ಲಿ ದ್ವಿಶತಕ ಗಳಿಸಿದ್ದಾರೆ.

ಗಿಲ್ ಸೆನಾ ದೇಶಗಳಲ್ಲಿ ದ್ವಿಶತಕ ಗಳಿಸಿದ ಮೊದಲ ಏಷ್ಯಾದ ನಾಯಕ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಅವರಿಗಿಂತ ಮೊದಲು, ಲಾರ್ಡ್ಸ್‌ನಲ್ಲಿ 193 ರನ್ ಗಳಿಸಿದ ತಿಲಕರತ್ನೆ ದಿಲ್ಶಾನ್ ಅವರ ಹೆಸರಿನಲ್ಲಿ ಅತ್ಯುತ್ತಮ ಸ್ಕೋರ್ ಇತ್ತು. ಇದಲ್ಲದೆ, ವಿದೇಶದಲ್ಲಿ ನಾಯಕನಾಗಿ ಭಾರತದಿಂದ ಇದು ಎರಡನೇ ಶತಕವಾಗಿದೆ. 2016 ರಲ್ಲಿ ನಾರ್ತ್ ಸೌಂಡ್‌ನಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಕೊಹ್ಲಿ ದ್ವಿಶತಕ ಗಳಿಸಿದರು.ಗಿಲ್ ದ್ವಿಶತಕ ಗಳಿಸುವ ಮೂಲಕ ಒಂದು ಹೆಜ್ಜೆ ಮುಂದೆ ಹೋಗಿ, ಇಂಗ್ಲಿಷ್ ನೆಲದಲ್ಲಿ ಭಾರತದ ಪರ ಟೆಸ್ಟ್‌ನಲ್ಲಿ ಅತಿ ಹೆಚ್ಚು ರನ್ ಗಳಿಸಿದ ಆಟಗಾರರಾದರು. 1979 ರಲ್ಲಿ ದಿ ಓವಲ್‌ನಲ್ಲಿ ಸುನಿಲ್ ಗವಾಸ್ಕರ್ ಅವರ 221 ರನ್‌ಗಳ ದಾಖಲೆಯನ್ನು ಅವರು ಹಿಂದಿಕ್ಕಿದ್ದಾರೆ.

ಭಾರತ ಪರ ಟೆಸ್ಟ್ ಮತ್ತು ಏಕದಿನ ಪಂದ್ಯಗಳಲ್ಲಿ ದ್ವಿಶತಕ ಗಳಿಸಿದವರ ಕ್ಲಬ್‌ಗೆ ಗಿಲ್ ಮತ್ತೊಂದು ದಾಖಲೆಯನ್ನು ನಿರ್ಮಿಸಿದ್ದಾರೆ, ಅವರಲ್ಲದೆ ಸಚಿನ್ ತೆಂಡೂಲ್ಕರ್, ವೀರೇಂದ್ರ ಸೆಹ್ವಾಗ್ ಮತ್ತು ರೋಹಿತ್ ಶರ್ಮಾ ಎರಡೂ ಸ್ವರೂಪಗಳಲ್ಲಿ ದ್ವಿಶತಕ ಗಳಿಸಿದ್ದಾರೆ.

ಗಿಲ್ ಈಗ ನಾಯಕನಾಗಿ ಟೆಸ್ಟ್‌ನಲ್ಲಿ ದ್ವಿಶತಕ ಗಳಿಸಿದ ಆರನೇ ಭಾರತೀಯ ನಾಯಕನಾಗಿದ್ದಾರೆ. ವಿರಾಟ್ ಕೊಹ್ಲಿ ಈ ಸಾಧನೆಯನ್ನು 7 ಬಾರಿ ಮಾಡಿದ್ದಾರೆ. ಸುನಿಲ್ ಗವಾಸ್ಕರ್, ಸಚಿನ್, ಮನ್ಸೂರ್ ಅಲಿ ಖಾನ್ ಪಟೌಡಿ, ಮಹೇಂದ್ರ ಸಿಂಗ್ ಧೋನಿ ತಲಾ ಒಂದು ದ್ವಿಶತಕ ಗಳಿಸಿದ್ದಾರೆ. ಈಗ ಗಿಲ್ ಈ ಪಟ್ಟಿಗೆ ಸೇರಿದ್ದಾರೆ.ಗಿಲ್‌ಗೆ ತ್ರಿಶತಕ ಬಾರಿಸುವ ಅವಕಾಶ ಸಿಕ್ಕಿದ್ದರೂ, ಅದನ್ನು ತಪ್ಪಿಸಿಕೊಂಡು 269 ರನ್‌ಗಳಿಗೆ ಔಟಾದರು. ಭಾರತದ ಮೊದಲ ಇನ್ನಿಂಗ್ಸ್ 587 ರನ್‌ಗಳ ಬೃಹತ್ ಸ್ಕೋರ್‌ಗೆ ಕೊನೆಗೊಂಡಿತು. ಇಂಗ್ಲೆಂಡ್ ಪರ ಶೋಯೆಬ್ ಬಶೀರ್ ಗರಿಷ್ಠ 3 ವಿಕೆಟ್‌ಗಳನ್ನು ಪಡೆದಿದ್ದಾರೆ.

## ಮೊಹರಂ ಹಬ್ಬ ಹಿನ್ನಲೆಯಲ್ಲಿ ಜುಲೈ 7ರವರೆಗೆ ಮದ್ಯ ಮಾರಾಟ ನಿಷೇಧ

**ರಾಯಚೂರು,ಜು.5–** ಜಿಲ್ಲೆಯಾದ್ಯಂತ ಮೊಹರಂ ಹಬ್ಬದ ಖತ್ತಲ್ ರಾತ್ರಿ ಆಚರಣೆ ಪ್ರಯುಕ್ತ ಜುಲೈ 5ರ ಬೆಳಿಗ್ಗೆ 06 ಗಂಟೆಯಿಂದ ಜುಲೈ 07ರ ಬೆಳಿಗ್ಗೆ 06 ಗಂಟೆಯವರೆಗೆ ರಾಯಚೂರು ಜಿಲ್ಲೆಯಾದ್ಯಂತ ಮದ್ಯ ಮಾರಾಟ ಹಾಗೂ ಸಾಗಾಣಿಕೆಯನ್ನು ಅಬಕಾರಿ ಕಾಯ್ದೆ 1965 ರ ಕಲಂ.21 (1) ರನ್ವಯ ನಿಷೇಧಿಸಿ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

ನಿಗದಿತ ದಿನಗಳಲ್ಲಿ ಎಲ್ಲಾ ರೀತಿಯ ಮದ್ಯೆ ತಯಾರಿಕಾ ಘಟಕಗಳು, ಸಾಗಾಣಿಕೆ ಮತ್ತು ಸಂಗ್ರಹಣೆಯನ್ನು ಮಾರಾಟ ಮಳಿಗೆಗಳನ್ನು ಬಂದ್ ಇಡಲು ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ.

## ಲಿಂಗಸುಗೂರು ಜಿಟಿಟಿಸಿ ಸಂಸ್ಥೆಯಲ್ಲಿ ಪ್ರವೇಶಾತಿಗೆ ಅರ್ಜಿ ಆಹ್ವಾನ

**ರಾಯಚೂರು,ಜು.5–** ಜಿಲ್ಲೆಯ ಲಿಂಗಸುಗೂರು ಪಟ್ಟಣದಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ) ವತಿಯಿಂದ 2025–26 ನೇ ಸಾಲಿನ ಜಿಟಿಟಿಸಿಯ ದೀರ್ಘಾವಧಿ ಡಿಎಆರ್ ಕೋರ್ಸ್ಗೆ ಪ್ರವೇಶಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಪ್ರಾಂಶುಪಾಲರು ತಿಳಿಸಿದ್ದಾರೆ.

ರಾಯಚೂರು ಭಾಗದ ಯುವಕರಿಗೆ ಉನ್ನತ ಕೌಶಲ್ಯಾಧಾರಿತ ತಾಂತ್ರಿಕ ತರಬೇತಿಗಳನ್ನು ನಡೆಸುತ್ತಿದೆ. ಈ ಸಂಸ್ಥೆಯು ಪ್ರಸಕ್ತ ಸಾಲಿನ ಡಿಎಆರ್ (ಆರಿಟಅಟಚಿ ಖಟಿ ಂಣಣಔಟಚಿಣುಔಟಿ ಚಿಟಿಜ ಖಔಭಔಣುಛಿ) 3+1 ವರ್ಷದ ಕೋರ್ಸ್ ಎಸ್ಎಸ್ಎಲ್ಸಿ/ ಐಟಿಐ/ ಪಿಯುಸಿ ಸೈನ್ಸ್ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಉಳಿದಿರುವ ಕೆಲವೇ ಸೀಟುಗಳ ಭರ್ತಿಗಾಗಿ ಮೊದಲು ಬಂದವರಿಗೆ ಮೊದಲ ಆದ್ಯತೆಯ ಮೇರೆಗೆ ಪ್ರವೇಶಾತಿ ಪಡೆಯಬಹುದಾಗಿದೆ.

ಈ ಕೋರ್ಸ್ಗಳಿಗೆ ಕರ್ನಾಟಕ ಸರ್ಕಾರ ಮತ್ತು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತಿನ (ಂಖಅಖಇ) ಯಿಂದ ಮಾನ್ಯತೆ ಪಡೆದಿರುತ್ತದೆ. ಈ ಕೋರ್ಸ್ಗಳು 03+01 ವರ್ಷದ ಅವಧಿಯಾಗಿದ್ದು, ಮೊದಲ 03 ವರ್ಷ ಸಂಸ್ಥೆಯಲ್ಲಿ ತರಬೇತಿ ನೀಡಲಾಗುವುದು ನಂತರ 04ನೇಯ ವರ್ಷದಲ್ಲಿ ಪ್ರತಿಷ್ಠತ ಕೈಗಾರಿಕೆಗಳಲ್ಲಿ ಕಡ್ಡಾಯ 01 ವರ್ಷ ಕೈಗಾರಿಕಾ ತರಬೇತಿಗಾಗಿ ಕಳುಹಿಸಲಾಗುವುದು, ಈ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಆಕರ್ಷಕ ಸ್ಟೈಫಂಡ್ ಮತ್ತು ಇನ್ನಿತರ ಸೌಲಭ್ಯಗಳು ದೊರೆಯುತ್ತವೆ. ಈ ಕೋರ್ಸ್ಗಳ ಪ್ರವೇಶಾತಿಯಲ್ಲಿ ಮಹಿಳಾ ಅಭ್ಯರ್ಥಿಗಳಿಗೆ 33% ಪ್ರತಿಶತ ಹಾಗೂ ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ 371 (ಜೆ) ಮೀಸಲಾತಿ ಸೌಲಭ್ಯವಿರುತ್ತದೆ.

ಈ ತರಬೇತಿಯು ಇನ್ನಿತರ ಡಿಪ್ಲೋಮಾ ಕೋರ್ಸ್ಗಳಿಗಿಂತ ವಿಭಿನ್ನವಾಗಿದ್ದು, ಹಲವಾರು ವಿಶೇಷತೆಗಳನ್ನು ಹೊಂದಿದ್ದು, ತರಬೇತಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಪ್ರತಿಶತ 100ರಷ್ಟು ಉದ್ಯೋಗ ಒದಗಿಸಿ ಕೊಟ್ಟ ಸಂಸ್ಥೆಯಾಗಿದೆ. ಸಂಸ್ಥೆಯಿಂದ ತರಬೇತಿಯನ್ನು ಪಡೆದ ವಿದ್ಯಾರ್ಥಿಗಳು ಇಂದು ಪ್ರತಿಷ್ಠಿತ ಖಾಸಗಿ ಕಂಪನಿಗಳಲ್ಲಿ ದೇಶ, ವಿದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸ್ವತಃ ಉದ್ಯಮದಾರರಾಗಿ ಅನೇಕ ಉದ್ಯೋಗಿಗಳನ್ನು ಸೃಷ್ಟಿಸಿ ನಿರುದ್ಯೋಗ ಪ್ರಮಾಣವನ್ನು ಇಳಿಕೆ ಮಾಡುತ್ತಿದೆ.

ಎಸ್ಎಸ್ಎಲ್ಸಿ ಪಾಸಾದ ಕ್ರಿಯಾಶೀಲ, ಸೃಜನಶೀಲ ವಿದ್ಯಾರ್ಥಿಗಳಿಗೆ ಈ ಕೋರ್ಸಗಳ ತರಬೇತಿಯ ಸುವರ್ಣಾವಕಾಶವಾಗಿದ್ದು, ಅತ್ಯಂತ ಕಡಿಮೆ ವೆಚ್ಚದಲ್ಲಿ ತಾಂತ್ರಿಕ ಶಿಕ್ಷಣ ನೀಡಿ, ಉದ್ಯೋಗ ದೊರಕಿಸಿಕೊಡುವ ವಿಶಿಷ್ಟ ತರಬೇತಿಗಳಾಗಿವೆ. ಈ ತರಬೇತಿಗಳಿಗೆ ಸೇರುವ ಅರ್ಹ ಅಭ್ಯರ್ಥಿಗಳಿಗೆ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಶಿಕ್ಷಣ ಸಾಲದ ಸಹಾಯ ಕೂಡ ದೊರೆಯುತ್ತದೆ. ಆಸಕ್ತ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರು ನೇರವಾಗಿ ಉಪಕೇಂದ್ರಕ್ಕೆ ಅಗತ್ಯ ದಾಖಲಾತಿಗಳೊಂದಿಗೆ ಭೇಟಿ ನೀಡುವ ಮೂಲಕ ಉಳಿದಿರುವ ಕೆಲವೇ ಸೀಟುಗಳ ಭರ್ತಿಗಾಗಿ ಮೊದಲು ಬಂದವರಿಗೆ ಮೊದಲ ಆದ್ಯತೆಯ ಮೇರೆಗೆ ಪ್ರವೇಶಾತಿಯನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9902072101 ಅಥವಾ 7411421775ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಲಿಂಗಸುಗೂರು ಜಿಟಿಟಿಸಿ ಸಂಸ್ಥೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್‌ಟಾಪ್ ವಿತರಣೆ



**ಕಲಬುರಗಿ,ಜು.5–**ಕಂದಾಯ ಇಲಾಖೆಯಲ್ಲಿನ ಸೇವೆಗಳು ಕಾಗದ ರಹಿತವಾಗಿಸಲು ಮತ್ತು ಉತ್ತಮ ಗುಣಮಟ್ಟದ ಸೇವೆ ನೀಡುವ ಸದುದ್ದೇಶದಿಂದ ಸರ್ಕಾರದ ವತಿಯಿಂದ ಶಾಸಕ ಎಂ.ವೈ. ಪಾಟೀಲ ಅವರು ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್‌ಟಾಪ್ ನೀಡುವ ಮೂಲಕ ಉತ್ತಮ ಸೇವೆ ಸಲ್ಲಿಸಿ ಎಂದು ಗ್ರಾಮ ಆಡಳಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಸಂಜೀವಕುಮಾರ ದಾಸರ, ಅತನೂರ ಆರ್.ಐ. ಸಂಜೀವಕುಮಾರ, ಗ್ರಾಮ ಆಡಳಿತಾಧಿಕಾರಿಗಳಾದ ಪಾಂಡುರಂಗ ಇರಕರ್, ಭಾಗೇಶ ಯಾಳವಾರ, ಶಾಸಕರ ಆಪ್ತ ಸಹಾಯಕ ರಾಹುಲ್ ಮಳ್ಳಿ ಇದ್ದರು.

# ಅದೃಷ್ಟ ನಂಬಬೇಡಿ, ನಿಮ್ಮ ಸಾಮರ್ಥ್ಯ ನಂಬಿ :ಮಹಾಂತೇಶ್ ಮಸ್ಕಿ

**ಯುವ ಮಾರ್ಗ ಸುದ್ದಿ**



**ಮಾನ್ವಿ,ಜು.5–**ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಅಭ್ಯಾಸ ಕಡಿಮೆ ಮಾಡಿ ಬರಿ ಮೊಬೈಲಗಳಿಗೆ ಬಿದ್ದಿದ್ದಾರೆ.ಪುಸ್ತಕಗಳ ಮೇಲೆ ಪ್ರೀತಿ ದೂರವಾಗಿದೆ. ನೀವೆಲ್ಲಾ ಹೆಚ್ಚು ಹೆಚ್ಚು ಓದಿ ನಿಮ್ಮ ಸಾಮರ್ಥ್ಯ ವನ್ನು ನಂಬಿ ಅದೃಷ್ಟವನ್ನು ನಂಬಬೇಡಿ ಎಂದು ಹಿರಿಯ ಸಾಹಿತಿ ಚಿಂತಕ ಮಹಾಂತೇಶ್ ಮಸ್ಕಿ ಅಬಿಪ್ರಾಯಪಟ್ಟರು.

ಅವರು ಶನಿವಾರ ಪಟ್ಟಣದ ನೇತಾಜಿ ಪ.ಪೂ.ಕಾಲೇಜ್ ನಲ್ಲಿ ಪ್ರಥಮ ಪಿ.ಯು. ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಸ್ವಾಗತ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳು ಜ್ಞಾನ ಪೀಪಾಸುಗಳಾಗಬೇಕು,ಅಂದಿನ ಪಾಠವನ್ನು ಅಂದೇ ಮನನ ಮಾಡಬೇಕು. ಉತ್ತಮ ಕೌಶಲ್ಯ ರೂಢಿಸಿಕೊಳ್ಳಬೇಕು ಇಂದಿನ ಸಮಾಜದಲ್ಲಿ ಕೌಶಲ್ಯ ಕ್ಕೆ ಮಾತ್ರ ಬೆಲೆ ಇದೆ ಎಂದು ಮಹಾಂತೇಶ್ ಹೇಳಿದರು.ಇದೇ ಸಂದರ್ಭದಲ್ಲಿ ಕಳೆದ ವರ್ಷದಲ್ಲಿ ದ್ವಿತೀಯ ಪಿ.ಯು.ನಲ್ಲಿ ಶೇ.93% ಹೆಚ್ಚು ಅಂಕ ಪಡೆದ ಐದು ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.ಅಲ್ಲದೇ ದ್ವಿತೀಯ ಪಿ.ಯು.ಫಲಿತಾಂಶ ಶೇ.ನೂರಕ್ಕೆ ನೂರರಷ್ಟು ಬರಲು ಕಾರಣರಾದ ಎಲ್ಲಾ ಉಪನ್ಯಾಸಕರನ್ನು ಗೌರವಿಸಲಾಯಿತು.ಪ್ರಾಸ್ತಾವಿಕ ವಾಗಿ ಕಾರ್ಯದರ್ಶಿ ವಿಜಯ ಲಕ್ಷ್ಮಿ ಮಾತನಾಡಿದರು. ಪ್ರಥಮ ಮತ್ತು ದ್ವಿತೀಯ ವರ್ಷದ ವಿದ್ಯಾರ್ಥಿಗಳು ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಕೆ.ರಾಜ ರವಿವರ್ಮ, ಆರೀಫ್, ಸೇರಿದಂತೆ ಉಪನ್ಯಾಸಕರು ಇದ್ದರು.

# ಎಸ್.ಎಸ್.ಎಲ್.ಸಿ. ಪರೀಕ್ಷೆ–3ರ ಕೇಂದ್ರಗಳ ಸುತ್ತ ನಿಷೇದಾಜ್ಞೆ ಜಾರಿ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.5–**ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆ–3 ಜುಲೈ 5ರಿಂದ ಜುಲೈ 12ರವರೆಗೆ ನಡೆಯಲಿರುವ ಹಿನ್ನೆಲೆ ಪರೀಕ್ಷಾ ಕೇಂದ್ರಗಳ ಸುತ್ತ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163ರನ್ವಯ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯ ದೇವದುರ್ಗ ತಾಲೂಕಿನಲ್ಲಿ 03 ಕೇಂದ್ರ, ಲಿಂಗಸೂಗೂರು ತಾಲೂಕಿನಲ್ಲಿ 08 ಕೇಂದ್ರ, ಮಾನವಿ ತಾಲೂಕಿನಲ್ಲಿ 05 ಕೇಂದ್ರ, ರಾಯಚೂರು ತಾಲೂಕಿನಲ್ಲಿ 11 ಕೇಂದ್ರ ಹಾಗೂ ಸಿಂಧನೂರು ತಾಲೂಕಿನಲ್ಲಿ 04 ಕೇಂದ್ರ ಸೇರಿದಂತೆ ಒಟ್ಟು 31 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ಈ ಪರೀಕ್ಷೆಯು ಸುಗಮವಾಗಿ ನಡೆಯಲು ಆಯಾ ಪರೀಕ್ಷಾ ದಿನದಂದು ಆಯಾ ಪರೀಕ್ಷಾ ಕೇಂದ್ರಗಳ ಸುತ್ತಲು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023 ರ ಕಲಂ 163 ರನ್ವಯ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.



ಈ ಪರೀಕ್ಷೆ ಕೇಂದ್ರಗಳಿಗೆ ನಿಯೋಜಿಸಿದ ಸಿಬ್ಬಂದಿ ಮತ್ತು ಅಧಿಕಾರಿಗಳನ್ನು ಹೊರತುಪಡಿಸಿ ಯಾರೂ ನಿಷೇಧಿತ ಪ್ರದೇಶವನ್ನು ಪ್ರವೇಶಿಸಕೂಡದು. ಸದರಿ ದಿನಗಳಂದು ಪರೀಕ್ಷೆ ಕೇಂದ್ರಗಳಿಗೆ ಅದಿಕಾರಿಗಳು, ಸಿಬ್ಬಂದಿ ವರ್ಗದ ವರು ಹಾಗೂ ವಿದ್ಯಾರ್ಥಿಗ ಳು ಮೊಬೈಲ್ ಫೋನ್‌ಗಳು, ಪಠ್ಯ ಪುಸ್ತಕಗಳು ಹಾಗೂ ಕ್ಯಾಲ್ಕುಲೇಟರ್‌ಗಳು ತರುವುದನ್ನು ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಲಿನ ಎಲ್ಲಾ ಝರಾಕ್ಸ್ ಅಂಗಡಿಗಳನ್ನು ಹಾಗೂ ಸೈಬರ್ ಕೆಫೆಗಳನ್ನು ಪರೀಕ್ಷಾ ಸಮಯದಲ್ಲಿ ಕಡ್ಡಾಯವಾಗಿ ಮುಚ್ಚಬೇಕೆಂದು ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ.

# ಬಹುಕೋಟಿ ವೆಚ್ಚದಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದ ಸಚಿವ ಎನ್.ಎಸ್.ಬೋಸರಾಜು.



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.5–** ಪಟ್ಟಣದ ವಿವಿಧ ವಾರ್ಡಗಳಲ್ಲಿ ವಿವಿಧ ಇಲಾಖೆಯ ಅಭಿವೃದ್ದಿ ಕಾಮಗಾರಿಗಳಿಗೆ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ಚಾಲನೆ ನೀಡಿ ಮಾತನಾಡಿ, ಪಟ್ಟಣದ ವಿವಿಧ ವಾರ್ಡಗಳ ಅಭಿವೃದ್ದಿಗಾಗಿ ಸರ್ಕಾರದಿಂದ ಸಾಕಷ್ಟು ಅನುದಾನವನ್ನು ನೀಡಲಾಗಿದೆ ಅಧಿಕಾರಿಗಳು ಹಾಗೂ ಗುತ್ತಿದಾರರು ಗುಣಮಟ್ಟದ ಕಾಮಗಾರಿಗಳನ್ನು ಕೈಗೊಳ್ಳುವ ಮೂಲಕ ಜನರಿಗೆ ಅನುಕೂಲಮಾಡಿಕೊಡಬೇಕು. ಪಟ್ಟಣದ ವಿವಿಧ ವಾರ್ಡಗಳಲ್ಲಿ ಕೆ.ಕೆ.ಆರ್.ಡಿ.ಬಿ.ಯೋಜನೆಯ 2024–25 ನೇ ಸಾಲಿನಲ್ಲಿ ವಾರ್ಡ ನಂ 7 ಚೀಕಲಪರ್ವಿ ರಸ್ತೆ ಯಿಂದ ರಬ್ಬಣಕಲ್ ರಸ್ತೆ ವರೆಗೆ 50 ಲಕ್ಷ ವೆಚ್ಚದಲ್ಲಿ ಸಿ.ಸಿ. ರಸ್ತೆ, ವಾರ್ಡನಂ.8 ರಲ್ಲಿ ರಬ್ಬಣಕಲ್ ರಸ್ತೆಯಿಂದ ಹೊಸ ಸರ್ಕಾರಿ ಆಸ್ಪತ್ರೆಯ ವರೆಗೆ 50 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ , ವಾರ್ಡನಂ. 21 ರಲ್ಲಿ ಅಂಬಮ್ಮ ದೇವಿ ದೇವಸ್ಥಾನದವರೆಗೆ 35 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ , ವಾರ್ಡನಂ.13 ಉರ್ದು ಬಾಲಕಿಯರ ಶಾಲೆಯವರೆಗೆ 25 ಲಕ್ಷ ವೆಚ್ಚದಲ್ಲಿಸಿ.ಸಿ.ರಸ್ತೆ, ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಲೋಕೋಪಯೋಗಿ ಇಲಾಖೆಯಿಂದ 2023 –24 ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಸಿಲ್‌ವರ್ ಜುಬಲಿ ಟ್ಯಾಂಕ್ ವರೆಗೆ ಡಾಂಬರ್ ರಸ್ತೆ ನಿರ್ಮಾಣವನ್ನು 50 ಲಕ್ಷ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ. 2023 –24 ನೇ ಸಾಲಿನ 4059–ಎಸ್.ಸಿ.ಪಿ. ಯೋಜನೆಯಡಿಯಲ್ಲಿ ಪಟ್ಟಣದ ಶಿವಜ್ಯೋತಿ ಕಾಲೋನಿಯಲ್ಲಿನ ನಿವೇಶನದಲ್ಲಿ ಸರ್ಕಾರಿ ಬಾಲಕರ ಪದವಿ ನಿಲಯದ ಕಾಮಗಾರಿಯನ್ನು 7 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಶಾಸಕ ಹಂಪಯ್ಯನಾಯಕ,ಶರಣಪ್ಪನಾಯಕ ಗುಡದಿನ್ನಿ ,ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷರಾದ ಅಬ್ದುಲ್ ಗಾಫೂರ್ ಸಾಭ್ ,ಗ್ಯಾರಂಟಿ ಸಮಿತಿಯ ತಾ.ಅಧ್ಯಕ್ಷರಾದ ಬಿ.ಕೆ.ಅಮರೇಶಪ್ಪ , ಸೈಯಾದ್ ಖಾಲೀದ್ ಖಾದ್ರಿ, ರೌಡೂರು ಮಹಾಂತೇಶ ಸ್ವಾಮಿ, ಹೊನ್ನಪ್ಪ ಹೆಳವರ್,ಬಸವರಾಜ ಪಾಟೀಲ್ ಅತ್ತನೂರು,ಜಯಪ್ರಕಾಶ ತಾಯಪ್ಪ .ಬಿ.ಹೊಸೂರು, ಹುಸೇನಪ್ಪ ಜಗ್ಗಿ, ಜಾನಪ್ಪ, ನೀಲಕಂಠ ಸೇರಿದಂತೆ ಅನೇಕರು ಇದ್ದರು.

## ಬಳ್ಳಾರಿ ಕೆಎಂಎಫ್ ಚುನಾವಣೆ 12 ಸ್ಥಾನಗಳಿಗೆ28 ಅಭ್ಯರ್ಥಿಗಳು

**ಬಳ್ಳಾರಿ, ಜು..5–** ಇಲ್ಲಿನ ರಾಬಾಕೊವಿ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ (ಕೆಎಂಎಫ್) ದ ಆಡಳಿತ ಮಂಡಳಿಯ 12 ನಿರ್ದೇಶಕ ಸ್ಥಾನಗಳಿಗೆ ಜುಲೈ 10 ರಂದು ಚುನಾವಣೆ ನಡೆಯಲಿದ್ದು. ಅಂತಿಮವಾಗಿ 28 ಅಭ್ಯರ್ಥಿಗಳು ಕಣದಲ್ಲಿದ್ದಾರೆ ಅಂಖಡ ಬಳ್ಳಾರಿ ಜಿಲ್ಲೆಯ ನಾಲ್ಕು ಸ್ಥಾನಗಳಿಗೆ 12 ಜನ ಕಣದಲ್ಲಿದ್ದು. 3 ಸಾಮಾನ್ಯ ಕ್ಷೇತ್ರಕ್ಕೆ 9 ಜನ ಪುರುಷರು. ಒಂದು ಮಹಿಳಾ ಕ್ಷೇತ್ರಕ್ಕೆ 3 ಜನಕಣದಲ್ಲಿದ್ದಾರೆ. ಇದೇ ರೀತಿ ಕೊಪ್ಪಳ ಜಿಲ್ಲೆಯ ನಾಲ್ಕು ಸ್ಥಾನಗಳಿಗೆ 8ಜನ ಕಣದಲ್ಲಿದ್ದು. 3 ಸಾಮಾನ್ಯ ಕ್ಷೇತ್ರಕ್ಕೆ 6 ಜನ ಪುರುಷರು. ಒಂದು ಮಹಿಳಾ ಕ್ಷೇತ್ರಕ್ಕೆ 2 ಜನಕಣದಲ್ಲಿದ್ದಾರೆ. ಇನ್ನು ರಾಯಚೂರು ಜಿಲ್ಲೆಯ ನಾಲ್ಕು ಸ್ಥಾನಗಳಿಗೆ 8ಜನ ಕಣದಲ್ಲಿದ್ದು. 3 ಸಾಮಾನ್ಯ ಕ್ಷೇತ್ರಕ್ಕೆ 6 ಜನ ಪುರುಷರು. ಒಂದು ಮಹಿಳಾ ಕ್ಷೇತ್ರಕ್ಕೆ 2 ಜನಕಣದಲ್ಲಿದ್ದಾರೆ.ಈ ಬಾರಿಯೂ ಕಳೆದ ಬಾರಿ ಅಧ್ಯಕ್ಷರಾಗಿದ್ದ, ಮಾಜಿ ಶಾಸಕ ಭೀಮಾನಾಯ್ಕ ಸೇರಿಂದತೆ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ನಿರ್ದೇಶಕರು ಸ್ಪರ್ಧಾ ಕಣದಲ್ಲಿದ್ದಾರೆ. ಜು 10 ರಂದು ಕೆಎಂಎಫ್ ಕಚೇರಿ ಆವರಣದಲ್ಲಿಯೇ ಬೆಳಗ್ಗೆ 9 ಘಂಟೆಯಿಂದ ಸಂಜೆ 4.00 ಘಂಟೆಯವರೆಗೆ ಮತದಾನ ನಡೆಯಲಿದೆ. ಮತದಾನದ ನಂತರ ಮತಗಳ ಎಣಿಕೆ ಮಾಡಿ ಫಲಿತಾಂಶ ಘೋಷಣೆ ಮಾಡಲಿದ್ದಾರೆ.

## ಜುಲೈ 8ರಂದು ಕ್ಯಾಂಪಸ್ ಡ್ರೈವ್ ಸಂದರ್ಶನ

**ರಾಯಚೂರು,ಜು. 5–** ಇಲ್ಲಿನ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಬೆಂಗಳೂರಿನ ಶ್ರೀ ಸಾಯಿದೀಪ ಇವರ ವತಿಯಿಂದ ಜುಲೈ 8ರ ಬೆಳಿಗ್ಗೆ 10 ಗಂಟೆಗೆ ಕ್ಯಾಂಪಸ್ ಡ್ರೈವ್ ಸಂದರ್ಶನ ಹಮಿಕೊಳ್ಳಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ಎಸ್,ಎಸ್,ಎಲ್,ಸಿ ಅಂಕಪಟ್ಟಿ, ಐಟಿಐ ಪಾಸಾದ ಅಂಕಪಟ್ಟಿ, ಆಧಾರ್ ಕಾರ್ಡ್, ಬಯೋಡಾಟ, 02 ಭಾವಚಿತ್ರಗಳು, ಬ್ಯಾಂಕ್ ಪಾಸ್‌ಬುಕ್, ಗುರುತಿನ ಚೀಟಿ ದಾಖಲಾತಿಗಳೊಂದಿಗೆ ಹಾಜರಾಗಬಹುದಾಗಿದೆ.

ಸಂದರ್ಶನದಲ್ಲಿ ವಿಪ್ರೋ, ಕವಾಸಕಿ, ಟಿವಿಎಸ್, ಮಹಿಂದ್ರಾ, ಡಿಪಿ ವರ್ಲ್ಡ್, ಜೆಬಿಎಂ, ಯಾಜಕಿ, ಶಕ್ತಿ, ಇಂಡೋ ಸೇರಿದಂತೆ ನಾನಾ ಕಂಪನಿಗಳು ಭಾಗಿಯಾಗಲಿವೆ.

ಐಟಿಐ ಎರಡನೇಯ ವರ್ಷದಲ್ಲಿ ತರಬೇತಿಯನ್ನು ಪಡೆಯುತ್ತಿರುವವರು ಹಾಗೂ 2ನೇ ವರ್ಷವನ್ನು ತೇರ್ಗಡೆಯನ್ನು ಹೊಂದಿರುವ ತರಬೇತಿದಾರರು ಸಂದರ್ಶನ ನೀಡಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9449185499 ಅಥವಾ 9743304428ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರಿನ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಪ್ಲೋಮಾ ಪ್ರವೇಶಕ್ಕೆ ಅವಧಿ ಜುಲೈ 15ವರೆಗೆ ವಿಸ್ತರಣೆ

**ರಾಯಚೂರು,ಜು.5–** ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ಸೆಮಿಸ್ಟರ್/ ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್ ಡಿಪ್ಲೋಮಾಗೆ ಹಾಗೂ ವೃತ್ತಿಪರ ಅಭ್ಯರ್ಥಿಗಳ ಲ್ಯಾಟರಲ್ ಎಂಟ್ರಿ ಪ್ರವೇಶದ ಅವಧಿಯನ್ನು ಜುಲೈ 15ವರೆಗೆ ವಿಸ್ತರಿಸಲಾಗಿದೆ.

ಭರ್ತಿ ಆಗದೇ ಖಾಲಿ ಉಳಿದಿರುವ ಸೀಟುಗಳನ್ನು ಆಫ್‌ಲೈನ್ ಮೂಲಕ ಭರ್ತಿ ಮಾಡಲು ಇಚ್ಚಿಸಿರುವ ಅರ್ಹ ವಿದ್ಯಾರ್ಥಿಗಳು ಸಂಸ್ಥೆಯ ಪ್ರಾಚಾರ್ಯರಿಗೆ ಅರ್ಜಿಯನ್ನು ಜು.15ರೊಳಗಾಗಿ ಸಲ್ಲಿಸಿ ಪ್ರವೇಶ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಸಂಸ್ಥೆಯ ಪ್ರಾಂಶುಪಾಲರನ್ನು ಸಂಪರ್ಕಿಸುವಂತೆ ರಾಯಚೂರಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 07ರಂದು ಜಿಲ್ಲಾ ನೀರು, ನೈರ್ಮಲ್ಯ ಸಮಿತಿ ಸಭೆ

**ರಾಯಚೂರು,ಜು.5–** ಜಲ್ ಜೀವನ್ ಮೀಷನ್ ಯೋಜನೆಯಡಿಯಲ್ಲಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳ ಸಮಗ್ರ ಅನುಷ್ಠಾನಕ್ಕಾಗಿ ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯನ್ನು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ಜುಲೈ 07ರ ಬೆಳಿಗ್ಗೆ 9 ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ಸಮಿತಿಯ ಎಲ್ಲ ಸದಸ್ಯರು ಸಭೆಗೆ ಆಗಮಿಸಿ ಸಭೆಯನ್ನು ಯಶಸ್ವಿಗೊಳ್ಳಬೇಕೆಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

## ಸಾರ್ವಜನಿಕ ಮೆರವಣಿಗೆ ನಿಷೇಧ

**ರಾಯಚೂರು,ಜು.5–** ಜಿಲ್ಲೆಯ ದೇವದುರ್ಗ ತಾಲೂಕಿನ ರಾಮದುರ್ಗ ಗ್ರಾಮದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 35ರನ್ವಯ ಮೊಹರಂ ಹಬ್ಬವನ್ನು ಸಾರ್ವಜನಿಕವಾಗಿ ಗುಂಪುಗುಂಪಾಗಿ ಆಚರಿಸುವುದನ್ನು ಮತ್ತು ಸಾರ್ವಜನಿಕವಾಗಿ ಮೆರವಣಿಗೆ ಮಾಡುವುದನ್ನು ನಿಷೇಧಿಸಿ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

## ಜುಲೈ 7ರಂದು ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯ

**ರಾಯಚೂರು,ಜು.5–**ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗ–2ರ 110/11 ಕೆವಿ ವ್ಯಾಪ್ತಿಗೆ ಬರುವ ಎ.ಪಿ.ಎಮ್.ಸಿ ಉಪಕೇಂದ್ರದಲ್ಲಿ ವಿದ್ಯುತ್ ಮಾರ್ಗದ ಪರಿವರ್ತಕ ಬದಲಾವಣೆಯ ಕಾಮಗಾರಿಯನ್ನು ನಿರ್ವಹಿಸುವ ಪ್ರಯುಕ್ತ ಜುಲೈ 07 ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ. ಅಂದು ಬೆಳಗ್ಗೆ ಈ3 :ಡ್ರಗ್ಸ್ ಹೌಸ್ ಫೀಡರ್, ಎಲ್.ಬಿ.ಎಸ್. ನಗರ, ಅಲ್ಲಮ್ಮಪ್ರಭು ಕಾಲೋನಿ, ಚಂದ್ರಬಂಡ ರೋಡ, ಸಂತೋಷಿ ನಗರ, ವಿಶ್ವನಾಥ ಕಾಲೋನಿ, ಮೈಲಾರ ನಗರ, ಆಶ್ರಯ ಕಾಲೋನಿ ಹಾಗೂ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತೆಯವಾಗಲಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–226386, 08532–231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗ–2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**